ಸಂಪುಟ : 9 ಸಂಚಿಕೆ 218 ಪುಟ : 4 ಬೆಲೆ: 3.00 ರವಿವಾರ ಅಕ್ಟೋಬರ್ 6 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 218 Pages : 4 Price : 3.00 Sunday October 6 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಮೂರನೇ ದಿನದ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸನ್ಮಾರ್ಗದಲ್ಲಿ ನಡೆಯುವುದೇ ನಮ್ಮೆಲ್ಲರ ಗುರಿಯಾಗಲಿ

**■ವಿಜಯಸಾಕ್ಷಿ ಸುದ್ದಿ, ಅಬ್ಬಿಗೇರಿ (ಮಾನವ ಧರ್ಮ ಮಂಟಪ)**

ಬದುಕಿಗೆ ಭಗವಂತ ಕೊಟ್ಟ ಕೊಡುಗೆ ಅಪಾರ. ತುಳಿದು ಬದುಕುವುದಕ್ಕಿಂತ ತಿಳಿದು ಬದುಕುವುದು ಮುಖ್ಯ. ತುಳಿದು ಬದುಕಿದವರು ಬಹು ಬೇಗ ಅಳಿಯುತ್ತಾರೆ. ತಿಳಿದು ಬದುಕುವವರು ಅಳಿದ ಮೇಲೂ ಉಳಿಯುತ್ತಾರೆ. ಆ ಪರಮ ಜ್ಞಾನವನ್ನು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ಕಾಣಬಹುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದ ಮೂರನೇ ದಿನದ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಲ್ಲಿರುವ ಅಸುರೀ ಗುಣಗಳು ನಾಶವಾಗಿ ದೈವೀ ಗುಣಗಳು ಬಲಗೊಳ್ಳಬೇಕಿದೆ. ಯಾವಾಗಲೂ ನಾಶವಾಗದೇ ಇರುವುದು ಧರ್ಮ. ಇದನ್ನು ನಾಶಪಡಿಸುವ ಶಕ್ತಿ ಯಾರಿಗೂ ಯಾವ ಕಾಲಕ್ಕೂ ಇಲ್ಲ. ಉದಾತ್ತ ಜೀವನ ಮೌಲ್ಯಗಳನ್ನು ಸಂಪಾದಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ನಮ್ಮೆಲ್ಲರ ಗುರಿಯಾಗಬೇಕು. ಹೆತ್ತ ತಾಯಿ, ಹೊತ್ತ ಭೂಮಿ ಎಷ್ಟು ಮುಖ್ಯವೋ ಅಷ್ಟೇ ಧರ್ಮ ಮುಖ್ಯವೆಂಬುದನ್ನು ಮರೆಯಬಾರದು. ಸಂವೇದನಾಶೀಲ ಜೀವನಕ್ಕೆ ಆದರ್ಶ ಚಿಂತನಗಳ ಅವಶ್ಯಕತೆಯಿದೆ.

ವೀರಶೈವ ಧರ್ಮದ ಸಂಸ್ಕಾರಗಳು ಮಾನವ ಜೀವನದ ಉನ್ನತಿಗೆ ಮತ್ತು ಶ್ರೇಯಸ್ಸಿಗೆ ಕಾರಣವಾಗಿವೆ. ಕರ್ಮವನ್ನು ಕಳೆದು ಧರ್ಮವನ್ನು ಬಿತ್ತಿ ಬದುಕನ್ನು ಬಂಗಾರಗೊಳಿಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಜಾತಿಗಿಂತ ನೀತಿ, ತತ್ವಕ್ಕಿಂತ ಆಚರಣೆ ಬಹು ಮುಖ್ಯವೆಂದು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದೆ. ನವರಾತ್ರಿಯ 3ನೇ ದಿನ ಚಂದ್ರಘಂಟಾ ಹೆಸರಿನಲ್ಲಿ ದೇವಿಯ ಪೂಜಾರಾಧನೆ ನಡೆಯುತ್ತದೆ. ಆಹ್ಲಾದತೆ, ಮಮತೆ, ಕ್ಷಮಾಶೀಲತೆ, ವಾತ್ಸಲ್ಯ ಈ ದೇವಿಯ ಆರಾಧನೆಯಿಂದ ಪ್ರಾಪ್ತವಾಗಿ ಸತ್ಕಾರ್ಯ ಮಾಡಲು ಧೈರ್ಯ ಮತ್ತು ನಿರ್ಭಯತೆ ಉಂಟಾಗುವುದೆಂದರು.

ಗೃಹ ಸಚಿವರಾದ ಡಾ. ಜಿ.ಪರಮೇಶ್ವರ್ ಅವರು 'ಗುರು' ಹೆಸರಿನ ಇಂಗ್ಲೀಷ್ ಕೃತಿಯನ್ನು ಬಿಡುಗಡೆ ಮಾಡಿ ಮಾತನಾಡಿ, ಮನುಷ್ಯನ ಆದರ್ಶ ಜೀವನ ಉಜ್ವಲಗೊಳ್ಳಲು ಅರಿವು-ಆಚಾರ ಬೇಕು. ಧರ್ಮದಲ್ಲಿರುವ ಧಾರ್ಮಿಕ ಮತ್ತು ಸಾಮಾಜಿಕ ಚಿಂತನೆಗಳು ಜೀವನದ ವಿಕಾಸಕ್ಕೆ ಮುಖ್ಯವಾಗಿವೆ. ಅರಿವು ಪಡೆಯಲು ಗುರುವಿನ ಅಮೂಲ್ಯ ಮಾರ್ಗದರ್ಶನ ಬೇಕು. ಈ ಕೃತಿಯಲ್ಲಿ ಸಮಾಜದಲ್ಲಿ ಗುರುವಿನ ಪಾತ್ರಕ್ಕೆ ಎಷ್ಟು ಮಹತ್ವ ಇದೆ ಎಂಬುದನ್ನು ಮನವರಿಕೆ ಮಾಡಿಕೊಡುತ್ತದೆ. ಅತ್ಯಂತ ಸಂತೋಷದಿಂದ ಶ್ರೀ ರಂಭಾಪುರಿ ಜಗದ್ಗುರುಗಳ ದಸರಾ ಧರ್ಮ ಸಮ್ಮೇಳನದಲ್ಲಿ ಪಾಲ್ಗೊಂಡಿದ್ದೇನೆ. ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಧರ್ಮಾಚರಣೆ ಬಹು ಮುಖ್ಯವಾಗಿದೆ ಎಂದರು.

ಎಮ್ಮಿಗನೂರು ಹಂಪಿ ಸಾವಿರದೇವರಮಠದ ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮಿಗಳು ಜ್ಞಾನ ಸಾಧನೆಯಲ್ಲಿ ಸಿದ್ಧಾಂತ ಶಿಖಾಮಣಿಯ ಹಿರಿಮೆ ಬಗ್ಗೆ ಮಾತನಾಡಿ, ಶಿವಾಗಮಗಳಲ್ಲಿರುವ ಆದರ್ಶ ಮೌಲ್ಯಗಳನ್ನು ಈ ಅಮೂಲ್ಯ ಕೃತಿಯಲ್ಲಿ ಅರಿಯಬಹುದು. ಬದುಕಿನ ಉಜ್ವಲತೆಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಚಿಂತನಗಳು ದಿಕ್ಸೂಚಿಯಾಗಿವೆ ಎಂದರು.

ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯರು ಪ್ರಾಸ್ತಾವಿಕ ಮಾತನಾಡಿ, 'ಗುರು' ಕೃತಿಯು ಕಥಾ ರೂಪದಲ್ಲಿದ್ದು, ಶಿಕ್ಷಾ ಗುರು, ದೀಕ್ಷಾ ಗುರು, ಮೋಕ್ಷ ಗುರುವಿನ ಬಗ್ಗೆ ವಿವರಿಸಲಾಗಿದೆ. ಪ್ರಭುಲಿಂಗ ಶಾಸ್ತ್ರಿಗಳು 200ಕ್ಕೂ ಹೆಚ್ಚು ತಮಿಳು, ಇಂಗ್ಲೀಷ್ ಕೃತಿಗಳನ್ನು ರಚಿಸಿದ್ದಾರೆ. ಅವರಿಗೆ 'ಸಾಹಿತ್ಯ ಸಿರಿ' ಪ್ರಶಸ್ತಿ ದೊರೆತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.



ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ ಮಾತನಾಡಿ, ಶ್ರೀ ರಂಭಾಪುರಿ ಪೀಠದ ಜಗದ್ಗುರುಗಳು ನಿರಂತರ ಧರ್ಮ ಪ್ರಸಾರ ಮಾಡುತ್ತ ಬಂದಿದ್ದಾರೆ. ಮಾನವ ಧರ್ಮಕ್ಕೆ ಜಯವಾಗಲಿ, ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಲಿಂ.ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಘೋಷಣೆ ಮಾಡಿ ಭಾವೈಕ್ಯತೆ-ಸಾಮರಸ್ಯ ಉಂಟು ಮಾಡಲು ಶ್ರಮಿಸಿದ್ದನ್ನು ಮರೆಯಲಾಗದು. ಅಬ್ಬಿಗೇರಿ ಗ್ರಾಮದಲ್ಲಿ ಇಂಥ ಅದ್ಭುತ ದಸರಾ ಧರ್ಮ ಸಮ್ಮೇಳನ ಜರುಗುತ್ತಿರುವುದು ತಮ್ಮೆಲ್ಲರ ಧರ್ಮ ನಿಷ್ಠೆ ಹಾಗೂ ಶ್ರೀ ರಂಭಾಪುರಿ ಜಗದ್ಗುರುಗಳವರ ಮೇಲೆ ಇಟ್ಟಿರುವ ಭಕ್ತಿ ಶ್ರದ್ಧೆಗೆ ಈ ಸಮಾರಂಭ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

ಗದಗ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಸಮ್ಮುಖ ವಹಿಸಿದ್ದರು. ಬೀರೂರು ರುದ್ರಮುನಿ ಶಿವಾಚಾರ್ಯರು ಉಪಸ್ಥಿತರಿದ್ದರು. ಶಾಸಕ ಜಿ.ಎಸ್. ಪಾಟೀಲರು ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಶಾಸಕ ಎನ್.ಎಚ್. ಕೋನರೆಡ್ಡಿ, ಮಾಜಿ ಸಂಸದ ಐ.ಜಿ. ಸನದಿ, ಮಾಜಿ ಸಚಿವ ಬಿ.ಆರ್. ಯಾವಗಲ್, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಭಾಗವಹಿಸಿದ್ದರು.

ಅಬ್ಬಿಗೇರಿಯ ಉಪನ್ಯಾಸಕ ಬಸವರಾಜ ಪಲ್ಲೇದ ಸ್ವಾಗತಿಸಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಗದಗಿನ ಗಾನಭೂಷಣ ವೀರೇಶ ಕಿತ್ತೂರ ಮತ್ತು ಮಹಿಳಾ ರುದ್ರ ಬಳಗ ಗದಗ ಇವರಿಂದ ಸಂಗೀತ ಮತ್ತು ಶಿವಮೊಗ್ಗದ ಶಾಂತಾ ಆನಂದ ಇವರಿಂದ ನಿರೂಪಣೆ ನಡೆಯಿತು.

ಸಮಾರಂಭದ ನಂತರ ಶ್ರೀ ಪೀಠದ ಸಿಬ್ಬಂದಿ ಹಾಗೂ ಭಕ್ತರಿಂದ ಆಕರ್ಷಕ ನಜರ ಸಮರ್ಪಣೆ ಜರುಗಿತು. ಲಕ್ಷ್ಮೇಶ್ವರದ ಆನಂದಸ್ವಾಮಿ ಜಿ.ಗಡ್ಡದೇವರಮಠ ಹಾಗೂ ಪರಿವಾರದವರಿಂದ ಅನ್ನ ದಾಸೋಹದ ಸೇವೆ ಜರುಗಿತು.

### 'ಸಾಹಿತ್ಯ ಸಿರಿ' ಪ್ರಶಸ್ತಿ

ತೆಲಂಗಾಣ ರಾಜ್ಯ ಮೆಹಬೂಬ ನಗರದ ಹಿರಿಯ ಸಾಹಿತಿ ಪಂ. ಆರ್.ಎಂ. ಪ್ರಭುಲಿಂಗ ಶಾಸ್ತ್ರಿಯವರಿಗೆ 2024ನೇ ಸಾಲಿನ 'ಸಾಹಿತ್ಯ ಸಿರಿ' ಪ್ರಶಸ್ತಿ ಪ್ರದಾನ ಮಾಡಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವದಿಸಿದರು. ನರೇಗಲ್ಲ ಮಲ್ಲಿಕಾರ್ಜುನ ಶಿವಾಚಾರ್ಯರು ಪ್ರಶಸ್ತಿ ಪತ್ರ ವಾಚನ ಮಾಡಿದರು.

### ಗುರುರಕ್ಷೆ

ನಾಗಠಾಣ ಸಗರ ಹಿರೇಮಠದ ಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು, ಬೆಳ್ಳಾವಿ ಕಾರದಮಠದ ಕಾರದ ವೀರಬಸವ ಸ್ವಾಮಿಗಳು, ಅಬ್ಬಿಗೇರಿ ಅರಳೆಲೆಮಠದ ವಿಜಯಮಹಾಂತ ಶಿವಾಚಾರ್ಯ ಸ್ವಾಮಿಗಳು, ಯಲಬುರ್ಗಾ ದರಮುರಡಿಮಠದ ಬಸವಲಿಂಗೇಶ್ವರ ಸ್ವಾಮಿಗಳು, ಅಬ್ಬಿಗೇರಿಯ ಫಾಲಾಕ್ಷಯ್ಯ ಶಾಸ್ತ್ರಿಗಳು ಅರಳೆಲೆಮಠ, ಶಂಭುಲಿಂಗ ಶಾಸ್ತ್ರಿ ಕವಿಗಳು ಮಾಳಶೆಟ್ಟಿ, ನಿವೃತ್ತ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಸುರೇಶ ಅವರಡ್ಡಿ, ನಾಟಿವೈದ್ಯ ಭೈಲಪ್ಪ ತಳವಾರ, ಶಾಂತವ್ವ ಬಸಪ್ಪ ಹನಮನಾಳ, ಸಂಗಮ್ಮ ಮ.ಹಿರೇಮಠ ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 6ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 22 - ಲಿಡ್ಕರ್ ಬಡಾವಣೆ, ಅಪಾರ್ಟ್ಮೆಂಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 16, 18, 24, 19 - ಮಡಿವಾಳ ದೇವಸ್ಥಾನ, ಕೊನೇರಿ ಹೊಂಡ ಹೊಸ ಲೈನ್, ಅಂಬೇಡ್ಕರ್ ನಗರ, ಬಾಗಲಕೋಟಿರವರ ಲೈನ್, ಕುಂಬಾರ ಓಣಿ ಭಾಗ-1,2. ವಾರ್ಡ್ ನಂ. 29 - ಪರಶುರವರ ಲೈನ್, ಪಾಪಡೆರವರ ಲೈನ್, ಹೊಸ ಹುಡ್ಕೋ, ಬನ್ನಿಕಟ್ಟಿ.

ವಾರ್ಡ್ ನಂ. 33 - ಆರ.ಕೆ ನಗರದ ಪೂರ್ತಿ ಭಾಗಗಳು. ವಾರ್ಡ್ ನಂ. 10, 8 , 9 - ತೆಂಗಿನಕಾಯಿ ಬಜಾರ, ಕಬಾಡೆ ರೋಡ್, ತಗ್ಗಿನ ಪೇಟೆ, ಶಿರಹಟ್ಟಿ ಓಣಿ, ಹೆಲ್ತ್ ಕ್ಯಾಂಪ್, ಪೊಲೀಸ್ ಕ್ವಾರ್ಟರ್ಸ್ ಉಳಿದ ಕೆಲವು ಭಾಗಗಳು. ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ. 7 ರಂದು ದಿಶಾ ಸಮಿತಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ ಅವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 7 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ( ದಿಶಾ) ಸಮಿತಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2ಎ ಮೀಸಲಾತಿ ಬೇಡಿಕೆ ಕುರಿತು ಕೂಡಲ ಸಂಗಮದ ಬಸವ ಜಯಮೃತ್ಯುಂಜಯ ಸ್ವಾಮೀಜಿ ಹೇಳಿಕೆ

# ಬೇಡಿಕೆ ಈಡೇರದಿದ್ದರೆ ವಿಧಾನಸೌಧಕ್ಕೆ ಮುತ್ತಿಗೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಳಗಾವಿಯಲ್ಲಿ ನಡೆದ ಪಂಚಮಸಾಲಿ ವಕೀಲರ ರಾಜ್ಯಮಟ್ಟದ ವಕೀಲರ ಪರಿಷತ್ ಹೋರಾಟಕ್ಕೆ ಮಣಿದು ಸಿಎಂ ಸಿದ್ದರಾಮಯ್ಯನವರು ವಕೀಲರ ಭೇಟಿಗೆ ಅವಕಾಶ ನೀಡಿದ್ದಾರೆ. ಬಹಿರಂಗ ಸಭೆಯಲ್ಲಿ ಸಚಿವ ವಿನಯ ಕುಲಕರ್ಣಿ ಮೂಲಕ ಮಾತನಾಡಿ, ದಿನಾಂಕ ನಿಗದಿಪಡಿಸಿದ್ದಾರೆ. ಈ ಬಾರಿ ಪಂಚಮಸಾಲಿ ಸಮಾಜದ 2ಎ ಮೀಸಲಾತಿ ಬೇಡಿಕೆ ಈಡೇರುವ ವಿಶ್ವಾಸವಿದೆ. ಬೇಡಿಕೆ ಈಡೇರದಿದ್ದರೆ 10 ಸಾವಿರ ಜನರರೊಂದಿಗೆ ವಿಧಾನಸೌಧಕೆ ಮುತ್ತಿಗೆ ಹಾಕಲಾಗುವುದು ಎಂದು ಕೂಡಲ ಸಂಗಮದ ಬಸವ ಜಯಮೃತ್ಯುಂಜಯ ಸ್ವಾಮೀಜಿ ಹೇಳಿದರು.

ಶನಿವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ಸದರಿ ವಿಚಾರವಾಗಿ ಸ್ಥಳ ಮತ್ತು ಸಮಯ ಇನ್ನೂ ನಿಗದಿಯಾಗಿಲ್ಲ. ಈ ಬಗ್ಗೆ ಗಮನ ಹರಿಸುವಂತೆ ವಿನಯ ಕುಲಕರ್ಣಿ ಅವರಿಗೆ ವಿನಂತಿಸಲಾಗಿದೆ. ಈ ಹಿಂದೆಯೂ ಮಾತುಕತೆಗೆ ದಿನಾಂಕ ನಿಗದಿ ಮಾಡಿ ಮತ್ತೆ ಮುಂದೂಡಿಕೆಯಾಗಿತ್ತು. ಆದರೆ ಈ ಬಾರಿ ಅವರೇ ದಿನಾಂಕ ನಿಗದಿ ಮಾಡಿರುವುದರಿಂದ ನಮ್ಮ ಬೇಡಿಕೆ ಈಡೇರುವ ವಿಶ್ವಾಸವಿದೆ. ಸಕಾರಾತ್ಮಕ ಧೋರಣೆ ಇಟ್ಟುಕೊಂಡು ಮುಖ್ಯಮಂತ್ರಿಗಳನ್ನು ಭೇಟಿ ಮಾಡುವ ಬಗ್ಗೆ ವಕೀಲರ ಪರಿಷತ್‌ನಲ್ಲಿ ಚರ್ಚೆ ನಡೆಸಲಾಗಿದೆ. ಸಿಎಂ ಭೇಟಿ ಮಾಡುವ ನಿಯೋಗದಲ್ಲಿ ಯಾರಿರಬೇಕು, ಏನೆಲ್ಲಾ ವಿಷಯಗಳ ಬಗ್ಗೆ ಪ್ರಸ್ತಾಪಿಸಬೇಕು ಎನ್ನುವ ಕುರಿತು ಚರ್ಚೆ ನಡೆಸಲಾಗಿದೆ ಎಂದು ತಿಳಿಸಿದರು.



ಸಮಾಜದ ಹಿರಿಯ ವಕೀಲರಾದ ಸಿ.ಎಸ್. ನೇಗಿನಹಾಳ, ಶಿವಲಿಂಗಪ್ಪ, ಆರ್.ಸಿ. ಪಾಟೀಲ, ಎಸ್.ವಿ. ಪಾಟೀಲ ಸೇರಿದಂತೆ ಆರು ಜನ ವಕೀಲರ ಹೆಸರನ್ನು ಅಂತಿಮಗೊಳಿಸಲಾಗಿದೆ. ಪ್ರದೇಶವಾರು ಆದ್ಯತೆ ನೀಡಿ ಒಟ್ಟು 10 ಜನ ವಕೀಲರು ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಲಿದ್ದಾರೆ. ಸಿಎಂ ಭೇಟಿಯ ದಿನ 2 ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿರುವ ವಕೀಲರ ಪರಿಷತ್ ಸದಸ್ಯರೆಲ್ಲರೂ ಆ ದಿನ ಬೆಂಗಳೂರಿಗೆ ಾಗಮಿಸಬೇಕು ಎಂದು ಶ್ರೀಗಳು ವಿನಂತಿಸಿದರು.

ಕಾಂತರಾಜು ಆಯೋಗ ನಡೆಸಿರುವ ಜಾತಿ ಜನಗಣತಿ ಬಗ್ಗೆ ಸಮಾಜದ ಹಲವು ಗಣ್ಯರು, ಮಠಾಧೀಶರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಸರಕಾರ ಮತ್ತೊಮ್ಮೆ ಜಾತಿ ಜನಗಣತಿ ನಡೆಸಬೇಕು. ವೈಜ್ಞಾನಿಕವಾಗಿ ಮತ್ತು ನಿಖರ ದತ್ತಾಂಶಗಳನ್ನು ಒಳಗೊಂಡ ಜಾತಿ ಜನಗಣತಿಗೆ ನಮ್ಮ ಸಹಮತವಿದೆ. ಅದರಿಂದ ಸಮಾಜದಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿರುವ ಸಮಾಜಗಳಿಗೆ ನ್ಯಾಯ ಸಿಗಲು ಸಾಧ್ಯ ಎಂದು ಜಯಮೃತ್ಯುಂಜಯ ಶ್ರೀಗಳು ಇದೇ ಸಂದರ್ಭದಲ್ಲಿ ಪ್ರತಿಕ್ರಿಯಿಸಿದರು.

ಸುದ್ದಿಗೋಷ್ಠಿಯಲ್ಲಿ ಡಿ.ಎಲ್. ಪಾಟೀಲ, ಸಿ.ಎಚ್. ಪೊಲೀಸಪಾಟೀಲ, ಸಿ.ಎಸ್. ಕುಲಕರ್ಣಿ, ರವೀಂದ್ರ ಶಾಬಾದಿ, ಶಿವಲಿಂಗಪ್ಪ, ಸಿದ್ದನಗೌಡ ಪಾಟೀಲ, ಎಸ್.ವಿ. ಪಾಟೀಲ, ದೊಡ್ಡಬಸಪ್ಪ ಕಂಪ್ಲಿ, ಅಯ್ಯಪ್ಪ ಅಂಗಡಿ ಮುಂತಾದವರು ಉಪಸ್ಥಿತರಿದ್ದರು.

### ಅಬ್ಬಿಗೇರಿಯಲ್ಲಿ 3ನೇ ದಿನದ ಇಷ್ಟಲಿಂಗ ಮಹಾಪ್ರಜೆ ನೆರವೇರಿಸಿದ ರಂಭಾಪುರಿ ಶ್ರೀಗಳು

# ವೀರಶೈವ ಧರ್ಮ ಸಾಧಾರಣವಾದುದಲ್ಲ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**


ಆಧ್ಯಾತ್ಮಿಕ ಕ್ಷೇತ್ರವನ್ನು ತಿಳಿದುಕೊಳ್ಳುವುದು, ಅದರಲ್ಲಿನ ಆಚರಣೆಗಳನ್ನು ಪಾಲಿಸುವುದು ಅಷ್ಟು ಸುಲಭದ ಕೆಲಸವಲ್ಲ. ಇಷ್ಟಲಿಂಗ ಮಹಾಪೂಜೆ ನಮಗೆ ಇನ್ನಿಲ್ಲದ ಆನಂದವನ್ನು ನೀಡುತ್ತದೆ. ಅಂತರಂಗದಲ್ಲಿ ಮಾಡುವ ಈ ಪೂಜೆಯನ್ನು ಲೋಕಾಂತರಗೊಳಿಸಿದವರು ರಂಭಾಪುರಿ ಪೀಠದ ಹಿಂದಿನ ಜಗದ್ಗುರುಗಳಾದ ಶ್ರೀ ಗಂಗಾಧರ ಮಹಾಸ್ವಾಮಿಗಳು. ಅವರು ಆಧ್ಯಾತ್ಮಿಕ ಕ್ಷೇತ್ರದಲ್ಲಿ ಮಾಡಿದ ಕಾರ್ಯ ಅನನ್ಯವಾದುದು ಎಂದು ಶ್ರೀಮದ್ ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ರಾಜದೇಶೀಕೇಂದ್ರ ಶಿವಾಚಾರ್ಯ ಭಗವತ್ಪಾದರು ಹೇಳಿದರು.

ಅಬ್ಬಿಗೇರಿಯ ಹೊಸ ಹಿರೇಮಠದಲ್ಲಿ 3ನೇ ದಿನದ ಇಷ್ಟಲಿಂಗ ಮಹಾಪೂಜೆಯನ್ನು ನೆರವೇರಿಸಿದ ನಂತರ ನೆರೆದ ಭಕ್ತರನ್ನುದ್ದೇಶಿಸಿ ಅವರು ಆಶೀರ್ವಚನ ನೀಡಿದರು.

ಇಷ್ಟಲಿಂಗ ಪೂಜೆಯಲ್ಲಿ ಜಗನ್ನಿಯಾಮಕನಾದ ಶಿವನನ್ನು ನಾವು ಪೂಜಿಸುತ್ತೇವೆ. ಲಿಂಗ ರೂಪದಲ್ಲಿರುವ ಶಿವನ ಪೂಜೆ ಮನಸ್ಸಿಗೆ ಬಹಳಷ್ಟು ಆನಂದವನ್ನು ನೀಡುತ್ತದೆ. ಒಂದು ಸಂದರ್ಭದಲ್ಲಿ ಬ್ರಹ್ಮ ಶಿವನ ಮುಕುಟವನ್ನೂ, ವಿಷ್ಣು ಶಿವನ ಪಾದವನ್ನೂ ಕಾಣಲು ಹೋಗಿ ಪಟ್ಟ ಪಾಡು ಅಷ್ಟಿಷ್ಟಲ್ಲ. ಅದರಲ್ಲಿ ವಿಷ್ಣು ಅಲ್ಪ ಪ್ರಮಾಣದ ಯಶ ಕಂಡರೂ ಬ್ರಹ್ಮ ಸುಳ್ಳು ಹೇಳಿದ್ದರಿಂದ ಅವನಿಗೆ ಶಿವ ಶಾಪ ಕೊಟ್ಟನು. ಶಿವನ ಶಾಪದಿಂದಲೇ ನಾವು ಎಲ್ಲಿಯೂ ಬ್ರಹ್ಮ ದೇವರ ದೇವಸ್ಥಾನಗಳನ್ನು ಕಾಣುವುದಿಲ್ಲ ಎಂದು ಜಗದ್ಗುರುಗಳು ಹೇಳಿದರು.

ಈ ಭಾಗದಲ್ಲಿ ಶ್ರೀ ಅನ್ನದಾನೇಶ್ವರ ಮಠ ಅತ್ಯಂತ ಪ್ರಭಾವಶಾಲಿ ಮಠವಾಗಿದೆ. ಈ ಹಿಂದಿನ ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳು ಲಿಂಗ ಪೂಜಾ ನಿಷ್ಠರಾಗಿದ್ದರು. ಅವರಿಂದ ಶಿವಯೋಗ ಮಂದಿರವು ಅತ್ಯಂತ ಸಮರ್ಥವಾಗಿ ಬೆಳೆಯಿತು. ಹಾಲಕೆರೆ ಮಠದ ಕೀರ್ತಿಯೂ ಸಹ ದಶ ದಿಕ್ಕುಗಳಲ್ಲಿ ಪಸರಿಸಿತು. ಲಿಂ. ಡಾ. ಅಭಿನವ ಅನ್ನದಾನ ಶ್ರೀಗಳವರ ಕ್ರಿಯಾಶೀಲತೆಗೆ ಯಾರೂ ಸಾಟಿಯಾಗಲಿಕ್ಕಿಲ್ಲ. ಹಾಲಕೆರೆಯಲ್ಲಿಯೂ ಒಂದು ಹಿರೇಮಠವಿದೆ. ಅದರ ಬೆಳವಣಿಗೆಯ ಕಡೆಗೂ ಭಕ್ತರು ಕಾಳಜಿ ವಹಿಸಬೇಕೆಂದು ಜಗದ್ಗುರುಗಳು ತಿಳಿಸಿದರು.

ಲಿಂಗಪೂಜಾ ಕಾರ್ಯದಲ್ಲಿ ಶಾಸಕ ಜಿ.ಎಸ್. ಪಾಟೀಲ, ಶಿರಹಟ್ಟಿ ಶಾಸಕರ ಧರ್ಮಪತ್ನಿಯವರು, ಸುತ್ತಲಿನ ಗ್ರಾಮಗಳ ಅನೇಕ ಗಣ್ಯರು, ವಿ.ಬಿ. ಸೋಮನಕಟ್ಟಿಮಠ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು. ನಿಡಗುಂದಿ, ಮಾರನಬಸರಿ, ಹಾಳಕೇರಿ ಹಾಗೂ ಅಬ್ಬಿಗೇರಿ ಗ್ರಾಮದ ಮಹಿಳೆಯರು ಕುಂಭವನ್ನು ಹೊತ್ತು ಬಂದಿದ್ದರು. ಇಷ್ಟಲಿಂಗ ಮಹಾಪೂಜೆಯಲ್ಲಿ ನಾಡಿನ ಅನೇಕ ಶ್ರೀಗಳು ಪಾಲ್ಗೊಂಡಿದ್ದರು.



ವೀರಶೈವ ಧರ್ಮ ಸಾಧಾರಣವಾದುದಲ್ಲ. ಹಸಿದು, ನೀರಡಿಸಿ ಬಂದವರನ್ನು ಸಮಾಧಾನಗೊಳಿಸುವುದೇ ವೀರಶೈವ ಧರ್ಮದ ಮೂಲ ತತ್ವವಾಗಿದೆ. ಹಿಂದೂ ಧರ್ಮದಲ್ಲಿ ಗೋಮಾತೆಗೆ ವಿಶಿಷ್ಠ ಸ್ಥಾನವಿದೆ. ಅದನ್ನು ಪುಣ್ಯದ ಪ್ರಾಣಿ ಎಂದು ಭಾವಿಸುವ ನಾವು ಗೋಮಾತೆಯ ಪೂಜೆಯನ್ನು ಮಾಡುತ್ತೇವೆ. ಗೋಮಾತೆಯಿಂದ ನಿಶ್ಚಿತ ಲಾಭವನ್ನು ಪಡೆಯಬೇಕೆಂದರೆ ಅದರ ಪೃಷ್ಠ ಭಾಗವನ್ನು ಅಂದರೆ ಹಿಂಬದಿಯನ್ನು ಶ್ರದ್ಧೆಯಿಂದ ಪೂಜಿಸಿದರೆ ಖಂಡಿತ ನಿಮ್ಮ ಮನದ ಆಸೆಗಳು ಈಡೇರುತ್ತವೆ ಎಂದು ರಂಭಾಪುರಿ ಶ್ರೀಗಳು ಹೇಳಿದರು.

## ಶಿವಗಣಾರಾಧನೆ

ನಮ್ಮ ಮಾತೋಶ್ರೀಯವರಾದ



**ಶ್ರೀಮತಿ ಶೋಭಾ ಗುರುಬಸಪ್ಪ ಮಾಗಡಿ**

ಸಾ|| ಅಂತೂರ-ಬೆಂತೂರ, ತಾ.ಜಿ. ಗದಗ

ಇವರು ದಿ. 2-10-2024 ರಂದು ಬುಧವಾರ ತಮ್ಮ 49ನೇ ವಯಸ್ಸಿನಲ್ಲಿ ನಿಧನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತನ್ನಿಮಿತ್ಯ ಮೃತರ ಶಿವಗಣಾರಾಧನೆಯನ್ನು ದಿನಾಂಕ 6-10-2024 ರಂದು ರವಿವಾರ ಮಧ್ಯಾಹ್ನ 12-00 ಗಂಟೆಗೆ ಗದಗ ತಾಲೂಕಿನ ಬೆಂತೂರ ಗ್ರಾಮದಲ್ಲಿ ನೆರವೇರಿಸಲಾಗುವುದು ಕಾರಣ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

**ದುಃಖತಪ್ತರು**

ಪುತ್ರ : ಶರಣು ಗುರುಬಸಪ್ಪ ಮಾಗಡಿ

ತಂದೆ, ತಾಯಿ, ಸಹೋದರರು, ಮಾವಂದಿರು, ಮಕ್ಕಳು, ಸಹೋದರಿಯರು, ಮೊಮ್ಮಕ್ಕಳು ಮಾಗಡಿ ಕುಟುಂಬ ಹಾಗೂ ಅಪಾರ ಬಂಧು ಬಳಗದವರು

ಮೊ : 7795143713

## ಸಾಕ್ಷಿ ಸುಭಾಷಿತ

ಪ್ರೀತಿ ನಮ್ಮೆಲ್ಲರ ಅಸ್ತಿತ್ವದ ಭಾಷೆ.ಈ ಭಾಷೆಯೊಳಗೆ ಲೆಕ್ಕಾಚಾರಗಳಿಗೆ ಜಾಗವಿಲ್ಲ.ಭವಿಷ್ಯವೂ ಇಲ್ಲ.ಅದು ಬದುಕುವುದು ಈ ಕ್ಷಣಗಳೊಂದಿಗೆ ಮಾತ್ರ

–ಸುಭಾಷಿತ

## ಸಂಪಾದಕೀಯ

# ಹ್ಯಾಟ್ರಿಕ್ ಗೆಲುವಿಗೆ ಬ್ರೇಕ್

ಜಮ್ಮು–ಕಾಶ್ಮೀರ ಮತ್ತು ಹರಿಯಾಣ ವಿಧಾನಸಭೆ ಚುನಾವಣೋತ್ತರ ಸಮೀಕ್ಷೆ ಹೊರಬಂದಿದ್ದು, ಹರಿಯಾಣಾದಲ್ಲಿ ಈ ಬಾರಿ ಕಮಲ ಅರಳುವುದು ಅನುಮಾನವಾಗಿದೆ. ಅದೇ ರೀತಿ ಜಮ್ಮು ಕಾಶ್ಮೀರದ ಚುನಾವಣೋತ್ತರ ಸಮೀಕ್ಷೆ ಅಸ್ಪಷ್ಟವಾಗಿದ್ದು, ಅಧಿಕಾರದ ಗದ್ದುಗೆ ಯಾರಿಗೆ ಎನ್ನುವುದು ಭಾರೀ ಕುತೂಹಲ ಮೂಡಿಸಿದೆ.

ಕೇಂದ್ರದಲ್ಲಿ ಸತತ ಮೂರನೇ ಬಾರಿಗೆ ಅಧಿಕಾರ ಹಿಡಿದ ಬಿಜೆಪಿಗೆ, ಸಂಸತ್ ಸಮೀಪದ ರಾಜ್ಯವನ್ನು ಉಳಿಸಿಕೊಳ್ಳಲು ಪರದಾಡಬೇಕಾಗಿದೆ. ಸತತ ಎರಡು ಬಾರಿ ಅಧಿಕಾರ ಹಿಡಿದ ಬಿಜೆಪಿ ಈಗ ಜನರ ತಿರಸ್ಕಾರಕ್ಕೆ ಕಾರಣವಾಗಿದೆ. ಮುಖ್ಯವಾಗಿ ರೈತರ ಹೋರಾಟದ ಕಿಚ್ಚು ಬಿಜೆಪಿಗೆ ಈ ವಿಧಾನಸಭೆ ಚುನಾವಣೆಯಲ್ಲಿ ಬಿಸಿ ಮುಟ್ಟಿಸಿದೆ.

ಕೇವಲ ರೈತರ ಹೋರಾಟ ಮಾತ್ರವಲ್ಲದೇ ಅನೇಕ ಜನವಿರೋಧಿ ನೀತಿಗಳು ಬಿಜೆಪಿ ವಿರುದ್ಧ ಜನಾಕ್ರೋಶ ಮೂಡಲು ಕಾರಣವಾಯಿತು. ಅದೆಲ್ಲದರ ಪರಿಣಾಮ ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿದ್ದ ಬಿಜೆಪಿಗೆ ಮುಖಭಂಗ ಆಗುವುದು ನಿಶ್ಚಿತ.

ಚುನಾವಣೋತ್ತರ ಸಮೀಕ್ಷೆ ಫಲಿತಾಂಶ ಒಮ್ಮೊಮ್ಮೆ ವ್ಯತಿರಿಕ್ತವಾಗಬಹುದು. ಆದರೆ ಈ ಬಾರಿಯೂ ಪ್ರತಿಯೊಂದು ಸಮೀಕ್ಷೆಯಲ್ಲೂ ಬಿಜೆಪಿಗೆ ಹಿನ್ನಡೆ ಆಗಿರುವುದರಿಂದ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರುವುದು ಅನುಮಾನ. ಆದರೆ ಸಮೀಕ್ಷೆಯಲ್ಲಿ ವ್ಯಕ್ತವಾದ ಸ್ಥಾನಗಳು ಅಲ್ಪ ಪ್ರಮಾಣದಲ್ಲಿ ಏರಿಳಿತವಾಗಬಹುದು.

ಇನ್ನು ಕಣಿವೆ ರಾಜ್ಯ ಜಮ್ಮು ಮತ್ತು ಕಾಶ್ಮೀರದಲ್ಲಿ ಈ ಬಾರಿ ಅತಂತ್ರ ಸ್ಥಿತಿ ನಿರ್ಮಾಣವಾಗಲಿದೆ ಎಂದು ವರದಿಗಳು ಉಲ್ಲೇಖಿಸಿವೆ. ಕಾಂಗ್ರೆಸ್ ಮತ್ತು ಎನ್ ಸಿ ಪಾರ್ಟಿ ಈ ಬಾರಿ ತನ್ನ ಸಂಖ್ಯಾಬಲವನ್ನು ಕಳೆದುಕೊಳ್ಳಲಿದೆ ಎಂದೂ ಕೆಲ ಸಂಸ್ಥೆಗಳು ವರದಿ ಮಾಡಿವೆ. ಆದರೆ ಕಣಿವೆ ರಾಜ್ಯದ ಚುನಾವಣೋತ್ತರ ಸಮೀಕ್ಷೆ ಬಗ್ಗೆ ಒಮ್ಮತದ ಅಭಿಪ್ರಾಯ ವ್ಯಕ್ತವಾಗಿಲ್ಲ. ಹೀಗಾಗಿ ಫಲಿತಾಂಶ ಭಾರೀ ಕುತೂಹಲ ಮೂಡಿಸಿದೆ. ಒಟ್ಟಾರೆ ಈ ಎರಡೂ ರಾಜ್ಯದ ಚುನಾವಣೋತ್ತರ ಸಮೀಕ್ಷೆಗಳು ಬಿಜೆಪಿಗೆ ಬಲ ನೀಡಿಲ್ಲ.

## ಜಿಲ್ಲಾ ಕಸಾಪದಿಂದ ಅರಹುಣಸಿಯ ತೋಟದಲ್ಲಿ ವಿನೂತನ ಕಾರ್ಯಕ್ರಮ

# 'ತೋಟದಲ್ಲಿ ಸಾಹಿತ್ಯ ಕೂಟ' ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ, ನಿರಂತರ ಪ್ರಕಾಶನ ಗದಗ, ತುಷಾರ ಪ್ರಕಾಶನ ಕೊಪ್ಪಳ ಇವರ ಸಹಯೋಗದಲ್ಲಿ ಅ.6ರ ಬೆಳಿಗ್ಗೆ 10.30 ಗಂಟೆಗೆ 'ತೋಟದಲ್ಲಿ ಸಾಹಿತ್ಯ ಕೂಟ' ಒಕ್ಕಲಿಗನ ಒಳದನಿ–ನೆಲದ ಹಾಡು ಕಾರ್ಯಕ್ರಮವನ್ನು ಅರಹುಣಸಿಯ ರಮೇಶ ಕುರಿಯವರ ತೋಟದಲ್ಲಿ ಏರ್ಪಡಿಸಲಾಗಿದೆ.

ಒಕ್ಕಲಿಗನ ಒಳದನಿ ಕಾರ್ಯಕ್ರಮದ ಉದ್ಘಾಟನೆಯನ್ನು ಸಾಹಿತ್ಯ, ಸಂಸ್ಕೃತಿ ಚಿಂತಕರಾದ ಪ್ರೊ. ಚಂದ್ರಶೇಖರ ವಸ್ತ್ರದ ನೆರವೇರಿಸುವರು. ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಕೇಂದ್ರ ಸಾಹಿತ್ಯ ಅಕಾಡೆಮಿಯ ಕನ್ನಡ ಸಲಹಾ ಮಂಡಳಿ ಸದಸ್ಯ ಚನ್ನಪ್ಪ ಅಂಗಡಿ ಆಶಯ ನುಡಿಯನ್ನಾಡುವರು.

ಮುಖ್ಯ ಅತಿಥಿಗಳಾಗಿ ಮೈಸೂರಿನ ತೋಟಗಾರಿಕೆ ವಿಶ್ವವಿದ್ಯಾಲಯದ ಸಹ ಪ್ರಾಧ್ಯಾಪಕ ಡಾ. ಸಿದ್ಧಪ್ಪ ಆರ್., ಸಂಸ್ಕೃತಿ ಚಿಂತಕ ಡಾ. ಜಿ.ಬಿ. ಪಾಟೀಲ, ವಿಶ್ರಾಂತ ಹಿರಿಯ ತೋಟಗಾರಿಕೆ ನಿರ್ದೇಶಕ ಸುರೇಶ ಕುಂಬಾರ, ಡಾ. ಎಸ್. ಎಲ್ ಪಾಟೀಲ, ಡಾ. ಸಿ.ಎಂ. ರಫಿ, ರವೀಂದ್ರಗೌಡ ಪಾಟೀಲ, ಗಿರೀಶ ಹೊಸೂರ ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಮಾಲಾ ಡಿ.ಬಡಿಗೇರ, ಡಾ. ಸಿದ್ಧಲಿಂಗಪ್ಪ ಕೊಟ್ನಿಕಲ್, ವಿ.ಎನ್. ಮ್ಯಾಗೇರಿ, ಮುತ್ತನಗೌಡ ಚೌಡರಡ್ಡಿ, ನಾಗರಾಜ ಗುದ್ನೆಪ್ಪನವರ, ಎ.ಎಸ್. ಮಕಾನದಾರ ಉಪಸ್ಥಿತರಿರುವರು. ಶರಣಪ್ಪ ವಡಿಗೇರಿ, ಅನ್ನಪೂರ್ಣ ಮನ್ನಾಪೂರ, ಮಲ್ಲಮ್ಮ ಬಾಳಪ್ಪ ಕಟ್ಟೆಣ್ಣವರ ಇವರಿಂದ ಗೀತ ಗಾಯನ ಜರುಗಲಿದೆ.

ಕಾರ್ಯಕ್ರಮದಲ್ಲಿ ಡಾ. ರಶ್ಮಿ ಅಂಗಡಿ, ಅನ್ನದಾನಿ ಹಿರೇಮಠ, ಡಾ. ಬಸವರಾಜ ಪೂಜಾರ, ಡಾ. ರಾಜೇಂದ್ರ ಗಡಾದ ಭಾಗವಹಿಸುವರು. ಕವಿಗೋಷ್ಠಿಯಲ್ಲಿ ಪ್ರಕಾಶ ಕಡಮೆ ಹುಬ್ಬಳ್ಳಿ, ನಿರ್ಮಲಾ ಶೆಟ್ಟರ ಹುಬ್ಬಳ್ಳಿ, ಹೆಬಸೂರ ರಂಜಾನ್ ಧಾರವಾಡ, ಶಿವಕುಮಾರ ಕರನಂದಿ ಬಾಗಲಕೋಟೆ, ಲಕ್ಷ್ಮಣ ನಂದಿಹಾಳ ಬೆಂಗಳೂರು, ಶಿ.ಕಾ ಬಡಿಗೇರ ಕೊಪ್ಪಳ, ವಿಜಯಲಕ್ಷ್ಮಿ ಕೊಟಗಿ ಕೊಪ್ಪಳ, ಪಿ.ಎಸ್. ಅಮರದೀಪ ಕೊಪ್ಪಳ, ಮಹೇಶ ಬಳ್ಳಾರಿ ಕೊಪ್ಪಳ, ಮಂಜುನಾಥ ಚಿತ್ರಗಾರ ಕೊಪ್ಪಳ, ಭಾಗ್ಯಶ್ರೀ ಹುರಕಡ್ಲಿ ಗದಗ, ಸುರೇಶ ಕಂಬಳಿ ಕೊಪ್ಪಳ, ಇಸ್ಮಾಯಿಲ್ ತಳಕಲ್ ಕೊಪ್ಪಳ, ಕುಮಾರ ಅಮಾತ್ತೆಣ್ಣವರ ಕೊಪ್ಪಳ, ಅಲಿ ಎಂ.ಕೆ. ಕೊಪ್ಪಳ, ಮೌನೇಶ ನವಲಳ್ಳಿ ತಾವರಗೇರ, ಮರುಳಸಿದ್ಧಪ್ಪ ದೊಡ್ಡಮನಿ ಗದಗ, ಮಂಜುಳಾ ವೆಂಕಟೇಶಯ್ಯ ಗದಗ, ಡಾ. ವಿನಾಯಕ ಕಮತದ ಗದಗ, ನೀಲಮ್ಮ ಅಂಗಡಿ ಗದಗ, ಸಾಕ್ಷಿ ರವಿ ದೇವರಡ್ಡಿ ನರೇಗಲ್, ಮೈಲಾರಪ್ಪ ಬೂದಿಹಾಳ ಗಂಗಾವತಿ, ಚಂದ್ರಕಲಾ ಇಟಗಿಮಠ ಗದಗ, ಪ್ರೊ. ಬಸವರಾಜ ನೆಲಜೇರಿ ಗದಗ, ವಿರೂಪಾಕ್ಷ ಕಟ್ಟಿಮನಿ ಹುಬ್ಬಳ್ಳಿ, ಹನಮಂತ ಸೋಮನಕಟ್ಟಿ ಬೆಂಗಳೂರು, ಈಶ್ವರ ಕುರಿ ಜಕ್ಕಲಿ, ಯಲ್ಲಪ್ಪ ಹರ್ನಾಳಗಿ ಕೊಪ್ಪಳ, ನೂರಅಹಮದ್ ನಾಗನೂರ ಗದಗ, ಮಂಗಳಗೌರಿ ಹಿರೇಮಠ ಗದಗ, ರಂಗನಾಥ ಅಕ್ಕಸಾಲಿ ಕೊಪ್ಪಳ, ರಮಾ ಚಿಗಟೇರಿ ಗದಗ, ಅನಸೂಯಾ ಮಿಟ್ಟಿ ಕವನ ವಾಚನ ಮಾಡಲಿದ್ದಾರೆ.

ಇದೇ ಸಂದರ್ಭದಲ್ಲಿ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಕೃಷಿ ಮೇಳದಲ್ಲಿ 2024ನೇ ಸಾಲಿನ ಶ್ರೇಷ್ಠ ಕೃಷಿಕ ಮಹಿಳೆ ಪ್ರಶಸ್ತಿ ಪುರಸ್ಕೃತರಾದ ಶಿಲ್ಪಾ ರಮೇಶ ಕುರಿ (ಮ್ಯಾಗೇರಿ) ಅವರನ್ನು ಸನ್ಮಾನಿಸಲಾಗುವದು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ರಮೇಶ ಕುರಿಯವರ ಪರಿಹಾರ ಹಾಗೂ ಕಸಾಪ ಕಾರ್ಯದರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

12 ಗಂಟೆಗೆ ಜರುಗುವ ನೆಲದ ಹಾಡು ಕವಿಗೋಷ್ಠಿಯನ್ನು ಜಿಲ್ಲಾ ಖಜಾನೆ ಅಧಿಕಾರಿ ವಿ.ಹರಿನಾಥಬಾಬು ಉದ್ಘಾಟಿಸುವರು. 'ಅಕ್ಷರ ಸಂಗಾತ' ಪತ್ರಿಕೆಯ ಸಂಪಾದಕ ಟಿ.ಎಸ್. ಗೊರವರ ಆಶಯ ನುಡಿಗಳನ್ನಾಡುವರು. ಮುಖ್ಯ ಅತಿಥಿಗಳಾಗಿ ಡಾ. ಅರ್ಜುನ ಗೊಳಸಂಗಿ, ಶೋಭಾ ಮೇಟಿ, ಅಕ್ಬರ್ ಸಿ.ಕಾಲಿಮಿರ್ಚಿ, ಡಾ. ನಿಂಗು ಸೊಲಗಿ, ರಾಜೇಂದ್ರ ಪಾಟೀಲ ಭಾಗವಹಿಸುವರು.

# ಸನ್ಮಾನ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಕನ್ನಡ ಎಂ.ಎನಲ್ಲಿ ಬಂಗಾರದ ಪದಕ ಪಡೆದಿರುವ ಪೂಜಾ ವಿನಾಯಕ ಗ್ರಾಮಪುರೋಹಿತ ಅವರಿಗೆ ಇಲ್ಲಿನ ಬ್ರಹ್ಮ ಸಮಾಜದ ವತಿಯಿಂದ ಶ್ರೀ ದತ್ತ ಭಕ್ತ ಮಂಡಳಿಯ ಆಶ್ರಯದಲ್ಲಿ ಸನ್ಮಾನವನ್ನು ಅಕ್ಟೋಬರ್ 6ರ ಸಂಜೆ 4.30ಕ್ಕೆ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಏರ್ಪಡಿಸಲಾಗಿದೆ ಎಂದು ಮಂಡಳಿಯ ಕಾರ್ಯದರ್ಶಿ ರಘುನಾಥ ಕೊಂಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸನ್ಮಾನ ಸಮಾರಂಭದ ಅಧ್ಯಕ್ಷತೆಯನ್ನು ನರೇಗಲ್ಲದ ಖ್ಯಾತ ವೈದ್ಯರಾದ ಡಾ. ಜಿ.ಕೆ. ಕಾಳೆಯವರು ವಹಿಸಿಕೊಳ್ಳಲಿದ್ದಾರೆ. ಮುಖ್ಯ ಅತಿಥಿಗಳಾಗಿ ಅಖಿಲ ಕರ್ನಾಟಕ ಬ್ರಾಹ್ಮಣ ಸಭಾದ ಸಂಘಟನಾ ಕಾರ್ಯದರ್ಶಿ ವಿಜಯ ನಾಡಜೋಷಿ, ಗದಗ ಜಿಲ್ಲಾಧ್ಯಕ್ಷ ವೆಂಕಟೇಶ ಕುಲಕರ್ಣಿ, ರೋಣ ತಾಲೂಕಾಧ್ಯಕ್ಷ ಗುರುರಾಜ ಕುಲಕರ್ಣಿ ಮತ್ತು ಗಜೇಂದ್ರಗಡ ತಾಲೂಕಾಧ್ಯಕ್ಷ ರಾಮಣ್ಣ ಗಾಡಗೋಳಿ, ಶ್ರೀ ದತ್ತ ಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಆಗಮಿಸಲಿದ್ದು, ಬ್ರಹ್ಮ ಸಮಾಜದ ಬಾಂಧವರು ಸಮಾರಂಭದಲ್ಲಿ ಪಾಲ್ಗೊಳ್ಳಲು ಕೊಂಡಿ ವಿನಂತಿಸಿದ್ದಾರೆ.

# ಎಸ್.ಎಸ್.ಕೆ. ದಸರಾ ಉತ್ಸವದ ಇಂದಿನ ಕಾರ್ಯಕ್ರಮಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ಎಸ್.ಎಸ್.ಕೆ. ದಸರಾ ಉತ್ಸವ ಸಮಿತಿ ವತಿಯಿಂದ ಅ.6ರ ಮುಂಜಾನೆ 9 ಗಂಟೆಗೆ ಸಮಾಜದ ವಿದ್ಯಾರ್ಥಿಗಳಿಗಾಗಿ ಮೂರುಕಾಲಿನ ಓಟ, ಲಿಂಬು ಚಮಚೆ, ಗೋಣಿ ಚೀಲ ಓಟ, ಸ್ಲೋ ಸೈಕ್ಲಿಂಗ್ ಆಟಗಳನ್ನು ಬೆಟಗೇರಿಯ ಎಸ್.ಎಸ್.ಕೆ. ಜಗದಂಬಾ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಆಯೋಜಿಸಲಾಗಿದೆ.

ನಂತರ ಬೆಟಗೇರಿ ಶ್ರೀ ಜಗದಂಬಾ ದೇವಸ್ಥಾನದಿಂದ ಶ್ರೀ ದಂಡಿನ ದುರ್ಗಮ್ಮನ ದೇವಸ್ಥಾನದವರೆಗೆ ವೇಗದ ಸೈಕಲ್ ಸ್ಪರ್ಧೆಯನ್ನು ನಡೆಸಲಾಗುವುದು. ಮುಂಜಾನೆ 10 ಗಂಟೆಗೆ ಸಮಾಜದ ಬಾಲಕರಿಗಾಗಿ ಗದುಗಿನ ವ್ಹಿ.ಡಿ.ಎಸ್.ಟಿ.ಸಿ. ಮೈದಾನದಲ್ಲಿ ಎಸ್.ಎಸ್.ಕೆ. ಕ್ರಿಕೆಟ್ ಟೂರ್ನಾಮೆಂಟ್ ನಡೆಯುವುದು. ಸಾಯಂಕಾಲ 6–30 ಗಂಟೆಗೆ ವರದ ವಿನಾಯಕ ಗ್ರುಪ್ ಅಕ್ಷತಾ ಖೋಡೆ ಹಾಗೂ ಸಂಗಡಿಗರಿಂದ ಕ್ಲಾಸಿಕಲ್ ಮತ್ತು ದೇವಿ ಗೊಂದಳ ಕಾರ್ಯಕ್ರಮ ನೆರವೇರುವುದು.

ಸಾಯಂಕಾಲ 7 ಗಂಟೆಗೆ ಡ್ಯಾನ್ಸ ಕಾಂಪಿಟೇಷನ್ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉತ್ಸವ ಸಮಿತಿಯ ಸಹಕಾರ್ಯದರ್ಶಿ ಪ್ರಕಾಶ ಬದಿ ವಹಿಸುವರು. ಮುಖ್ಯ ಅತಿಥಿಗಳಾಗಿ ಗದಗ–ಬೆಟಗೇರಿ ನಗರಸಭೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಪರಿಸರ) ಆನಂದ ಬದಿ, ಇಂಜಿನಿಯರುಗಳಾದ ರಾಘವೇಂದ್ರ ಭಾಂಡಗೆ, ನಾಗರಾಜ ಕಲಬುರ್ಗಿ, ಪ್ರಶಾಂತ ಶಿದ್ಲಿಂಗ, ಕಿಶನ್ ರಾಯಬಾಗಿ ಭಾಗವಹಿಸಲಿದ್ದು, ಬೆಟಗೇರಿಯ ಉದ್ದಿಮೆದಾರರಾದ ವಿಕಾಸ ಮಿಸ್ಕಿನ್ ಹಾಗೂ ಬೆಟಗೇರಿಯ ವಿಜಯಮಾಲಾ ಡ್ರೆಸಸ್ ಮಾಲಕರಾದ ತುಳಸಿನಾಥಸಾ ಮೇರವಾಡೆ ಇವರನ್ನು ಸನ್ಮಾನಿಸಲಾಗುವದು ಎಂದು ಪ್ರಕಟಣೆ ತಿಳಿಸಿದೆ.

# ದಾಂಡಿಯಾ ಕಾರ್ಯಕ್ರಮ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ಧಲಿಂಗನಗರದ ಶ್ರೀ ಬನ್ನಿಮಹಾಂಕಾಳಿ ಸೇವಾ ಟ್ರಸ್ಟ್ ವತಿಯಿಂದ ಅ. 2ರಿಂದ ನಮ್ಮೂರ ದಸರಾ ಉತ್ಸವಕ್ಕೆ ಚಾಲನೆ ನೀಡಲಾಗಿದೆ. ಉತ್ಸವದ ಅಂಗವಾಗಿ ಅ.6ರ ಸಂಜೆ 6.30ಕ್ಕೆ ದಾಂಡಿಯಾ ಕಾರ್ಯಕ್ರಮ ಜರುಗಲಿದೆ.

ಅ. 10ರಂದು ದುರ್ಗಾಷ್ಟಮಿ ನಿಮಿತ್ತ ಬೆಳಿಗ್ಗೆ 6.30ಕ್ಕೆ ದುರ್ಗಾಮಾತಾ ದೌಡದಂಡಿ ಜರುಗುವುದು. ಬಾಲ ಮಕ್ಕಳನ್ನು ನವದುರ್ಗೆಯರನ್ನಾಗಿ ಶೃಂಗರಿಸಿ ಮಧ್ಯಾಹ್ನ 12 ಗಂಟೆಗೆ ಶ್ರೀ ಅಂಬಾಭವಾನಿ ದೇವಸ್ಥಾನಕ್ಕೆ ಉಡಿ ತುಂಬಲು ಹೋಗಲಾಗುವುದು. ನಂತರ ಮಹಾ ಅನ್ನಸಂತರ್ಪಣೆ ಕಾರ್ಯಕ್ರಮ ಜರುಗಲಿದೆ.

ಅ. 11ರಂದು ಮಹಾನವಮಿ, ಆಯುಧ ಪೂಜೆ, ಅ. 12ರ ಸಚಿಜೆ 4.30ಕ್ಕೆ ಶ್ರೀ ಬನ್ನಿಮಹಾಂಕಾಳಿ ದೇವಸ್ಥಾನದಿಂದ ಪಾಲಕಿ ಮೆರವಣಿಗೆ, ಬಸವ ಮಂಟಪದ ಎದುರಿನ ನಾಗದೇವತಾ ಮಂಟಪದಲ್ಲಿ ಸೀಮೋಲ್ಲಂಘನೆ, ಬನ್ನಿ ಮುಡಿಯುವ ಕಾರ್ಯಕ್ರಮ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

# ನವರಾತ್ರಿ ಆಚರಣೆಯಿಂದ ಸಾತ್ವಿಕ ಗುಣ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ನವರಾತ್ರಿಯ ಕಾಲಘಟ್ಟದಲ್ಲಿ ಅಸುರೀ ಶಕ್ತಿಗಳ ವಿರುದ್ಧ ಧರ್ಮದ ದಂಡಯಾತ್ರೆ ಮತ್ತು ಕೆಟ್ಟದ್ದರ ಮೇಲೆ ಒಳಿತಿನ ವಿಜಯ ನಡೆಯುತ್ತದೆ. ದುರ್ಗುಣಗಳನ್ನು ದೂರ ಮಾಡಿ ಸಾತ್ವಿಕ ಗುಣ ಹೊಂದುವುದು ನವರಾತ್ರಿ ಆಚರಣೆಯ ಪರಮ ಗುರಿಯಾಗಿದೆ. ಶಿವರಾತ್ರಿ ಮತ್ತು ನವರಾತ್ರಿ ನಮ್ಮನ್ನು ದೈವತ್ವದತ್ತ ನಡೆಸುತ್ತವೆ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ಪಟ್ಟಣದ ದೇಸಾಯಿ ಬಣದಲ್ಲಿರುವ ಶ್ರೀ ದುರ್ಗಾದೇವಿ ದೇವಸ್ಥಾನದಲ್ಲಿ ನವರಾತ್ರಿ ಅಂಗವಾಗಿ ಹಮ್ಮಿಕೊಳ್ಳಲಾಗಿರುವ ಶ್ರೀ ದುರ್ಗಾದೇವಿ ಪುರಾಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನವರಾತ್ರಿಯ ಸಂದರ್ಭದಲ್ಲಿ ವಿಶೇಷವಾಗಿ ದೇವಿಶಕ್ತಿಯ ಆರಾಧನೆಗೆ ಮಹತ್ವ ನೀಡಲಾಗಿದೆ. ನವರಾತ್ರಿಯಲ್ಲಿ ವಿದ್ಯೆ, ಸಂಪತ್ತು, ಸಮೃದ್ಧಿಯ ಪ್ರತೀಕವಾಗಿರುವ ಜಗನ್ಮಾತೆಯನ್ನು ಸ್ಮರಿಸುವ ಕಾರ್ಯ ಮಾಡಲಾಗುತ್ತದೆ. ಪ್ರತಿವರ್ಷ ನವರಾತ್ರಿ ಸಂದರ್ಭದಲ್ಲಿ ದುರ್ಗಾದೇವಿ ದೇವಸ್ಥಾನದಲ್ಲಿ ದೇವಿಪುರಾಣ ಪ್ರವಚನ ಏರ್ಪಡಿಸುವ ಸಂಪ್ರದಾಯ ನೆರವೇರಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಂಜುನಾಥ ಮಾಗಡಿ ಮಾತನಾಡಿ, ನಮ್ಮ ಧಾರ್ಮಿಕ ಪರಂಪರೆಗಳು ನಮ್ಮ ನಾಡಿನ ಹೆಮ್ಮೆಯಾಗಿವೆ. ಪ್ರತಿಯೊಂದು ಹಬ್ಬದ ಆಚರಣೆಯಲ್ಲಿ ವಿಶಿಷ್ಟವಾದ ಧಾರ್ಮಿಕ ಹಿನ್ನೆಲೆ ಇರುತ್ತದೆ. ಧರ್ಮದಿಂದ ನಾವು ನಡೆದಾಗ ಧರ್ಮ ನಮ್ಮನ್ನು ನಡೆಸುತ್ತದೆ. ಈ ನಿಟ್ಟಿನಲ್ಲಿ ದೇವಸ್ಥಾನದಲ್ಲಿ ಪ್ರವಚನ ಕಾರ್ಯಕ್ರಮ ಹೆಚ್ಚು ಪರಿಣಾಮವನ್ನು ಬೀರುತ್ತಿದೆ ಎಂದರು.

ಈ ಸಚಿದರ್ಭದಲ್ಲಿ ಎಎಸ್ಐ ಮೀನಾಕ್ಷಿ ಮಟ್ಟಿ, ಪುರಸಭೆ ಸದಸ್ಯ ಎಸ್.ಕೆ. ಹವಾಲ್ದಾರ್, ದೇವಣ್ಣ ಬಳಿಗಾರ, ವೀರೇಂದ್ರಕುಮಾರ ಕಟಗಿ, ತಿಪ್ಪಣ್ಣ ರೊಟ್ಟಿಗವಾಡ, ಮಲ್ಲೇಶ ಚಿಕ್ಕೇರಿ, ಪ್ರಕಾಶ ಗುತ್ತಲ, ಮುತ್ತು ನೀರಲಗಿ, ಸುರೇಶ ನುಚ್ಚಂಬಲಿ, ಪವನ ಬಂಕಾಪೂರ, ಎಂ.ಎಸ್. ಹಿರೇಮಠ, ಚಂದ್ರು ಮಾಗಡಿ ಮುಂತಾದವರಿದ್ದರು. ಹನಮಂತಸಾ ಚೌದರಿ, ಜಿ.ಎಂ. ಪೂಜಾರ, ಚಂದ್ರಗೌಡ ಅಡರಕಟ್ಟಿ ಪುರಾಣ ಪ್ರವಚನ ನೀಡಿದರು. ಚಂದ್ರು ಮಾಗಡಿ ನಿರೂಪಿಸಿದರು.

# ಸನ್ಮಾರ್ಗ ಕಾಲೇಜಿನಲ್ಲಿ ಗಾಂಧಿ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ



ದೇಶದಲ್ಲಿ ಸ್ವಾತಂತ್ರ್ಯ ಕಹಳೆಯನ್ನೂದಿದ ಗಾಂಧೀಜಿಯವರು ಅಹಿಂಸಾ ಮಾರ್ಗವನ್ನು ಅನುಸರಿಸಿ ಅಜರಾಮರಾಗಿದ್ದಾರೆ. ಅವರ ದೇಶಪ್ರೇಮ, ಪ್ರತಿಯೊಬ್ಬರಲ್ಲಿ ಮೈಗೂಡಬೇಕಿದೆ. ಶಾಸ್ತ್ರೀಜಿಯವರ ಸ್ವಾಭಿಮಾನದ ಸರಳತನ, ಪ್ರಾಮಾಣಿಕತೆಯ ಜ್ಯೋತಿ ಮುಂತಾದ ಮೌಲ್ಯಗಳನ್ನು ಭಾರತೀಯರಾದ ನಾವೆಲ್ಲಾ ಮೈಗೂಡಿಸಿಕೊಂಡಾಗ ಅವರ ಜನ್ಮ ದಿನಾಚರಣೆ ಸಾರ್ಥಕವಾಗುವುದೆಂದು ಸ್ಟುಡೆಂಟ್ ಎಜ್ಯುಕೇಶನ್ ಸೊಸೈಟಿಯ ಚೇರಮಟಜಿ ಪ್ರೊ.ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ಅವರು ಸನ್ಮಾರ್ಗ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಗಾಂಧೀಜಿ ಮತ್ತು ಶಾಸ್ತ್ರೀಜಿ ಜನ್ಮ ದಿನಾಚರಣೆಯ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡುತ್ತಾ, ದೇಶಕ್ಕಾಗಿ ತ್ಯಾಗ, ಬಲಿದಾನ ಮಾಡಿದ ಮಹನೀಯರ ಸ್ಮರಣೆಯು ಭಾರತೀಯರಿಗೆ ಹಬ್ಬದ ಸಂಭ್ರಮ. ಆ ದಿಸೆಯಲ್ಲಿ ಮಹಾತ್ಮರ ದಿನಾಚರಣೆಗಳು ನಮ್ಮಲ್ಲಿ ದೇಶಾಭಿಮಾನ ಮೂಡಿಸುವುದರಲ್ಲಿ ಸಂದೇಹವಿಲ್ಲ ಎಂದರು.

ಪ್ರಾಚಾರ್ಯರಾದ ಪ್ರೊ. ಪ್ರೇಮಾನಂದ ರೋಣದ ಮಾತನಾಡಿ, ಸರಳ ಜೀವನ ಉನ್ನತ ವಿಚಾರಗಳನ್ನು ಬಿತ್ತಿದ ಮಹಾತ್ಮ ಗಾಂಧಿ ಮತ್ತು ಲಾಲ್ ಬಹೂದ್ದೂರ ಶಾಸ್ತ್ರೀಯವರ ವ್ಯಕ್ತಿತ್ವವನ್ನು ಇಂದಿನ ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕು ಎಂದರು.

ವೇದಿಕೆಯಲ್ಲಿ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ.ರೋಹಿತ ಹಾಗೂ ರಾಹುಲ ಒಡೆಯರ, ಪ್ರೊ.ಪುನೀತ ದೇಶಪಾಂಡೆ, ಪ್ರೊ.ಸೈಯ್ಯದ್ ಮತಿನ್ ಮುಲ್ಲಾ ಹಾಗೂ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿದ ಪ.ಪಂ ಉಪಾಧ್ಯಕ್ಷ ಮಿಥುನ ಜಿ.ಪಾಟೀಲ್

# ರೈತರು ಆರ್ಥಿಕವಾಗಿ ಸದೃಢರಾಗಿ

■ವಿಜಯಸಾಕ್ಷಿ ಸುದ್ದಿ, ಗದಗ



ಸಮೀಪದ ತಿಮ್ಮಾಪೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಆವರಣದಲ್ಲಿ ಕರ್ನಾಟಕ ಸರ್ಕಾರ ಕೃಷಿ ಇಲಾಖೆಯಿಂದ ರಿಯಾಯಿತಿ ದರದಲ್ಲಿ ಕೊಡಮಾಡುವ ಹಿಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಕಾಂಗ್ರೆಸ್ ಪಕ್ಷದ ಯುವ ಮುಖಂಡ ಹಾಗೂ ರೋಣ ಪ.ಪಂ ಉಪಾಧ್ಯಕ್ಷ ಮಿಥುನ ಜಿ.ಪಾಟೀಲ್ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರಿಗೆ ಸರ್ಕಾರ ಕೃಷಿ ಇಲಾಖೆಯಿಂದ ಅನೇಕ ಯೋಜನೆಗಳನ್ನು ರೂಪಿಸಿ ಜಾರಿಗೆ ತಂದಿದೆ. ಅದರಲ್ಲಿ ಪ್ರಮುಖವಾಗಿ ರೈತರಿಗೆ ಬಿತ್ತನೆ ಮಾಡಲು ಅನುಕೂಲವಾಗುವಂತೆ ರಿಯಾಯಿತಿ ದರದಲ್ಲಿ ಕಡಲೆ, ಜೋಳದ ಬೀಜ, ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳನ್ನು ವಿತರಣೆ ಮಾಡುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಂಡು ಬಿತ್ತನೆ ಮಾಡಿ ಉತ್ತಮ ಫಸಲು ಪಡೆದು ಆರ್ಥಿಕವಾಗಿ ಸದೃಢರಾಗಬೇಕು. ಅಧಿಕಾರಿಗಳೊಡನೆ ಉತ್ತಮ ಒಡನಾಟ ಹಾಗೂ ಸಂಬಂಧವನ್ನು ಬೆಳೆಸಿಕೊಂಡು ಇಲಾಖೆಯಿಂದ ಸಿಗುವ ಯೋಜನೆಗಳನ್ನು ಬಳಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಗದಗ–ಬೆಟಗೇರಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ವೀರಣ್ಣ ಗಡಾದ ಮಾತನಾಡಿ, ತಿಮ್ಮಾಪೂರ ಗ್ರಾಮ ಅಟಲ್ ಭೂ ಜಲ ಯೋಜನೆಗೆ ಒಳಪಡುತ್ತದೆ. ಅದರಲ್ಲಿ ರೈತರ ಜಮೀನುಗಳಲ್ಲಿ ಬರುವ ಸಣ್ಣ ಸಣ್ಣ ಹಳ್ಳಗಳಿಗೆ ಚೆಕ್ ಡ್ಯಾಮ್ ಕಟ್ಟಿಕೊಳ್ಳಬಹುದು. ಗೋಕಟ್ಟೆ, ಕೃಷಿ ಹೊಂಡ ನಿರ್ಮಾಣ ಕಾರ್ಯ ಮಾಡಿಕೊಳ್ಳಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ರಾಮಪ್ಪ ಹಚ್ಚಪ್ಪನವರ, ಹುಚ್ಚೀರಪ್ಪ ಜೋಗಿನ, ಯಲ್ಲಪ್ಪ ಜೋಗಿನ, ಕುಬೇರಗೌಡ ಪಾಟೀಲ್, ವಿರುಪಾಕ್ಷಪ್ಪ ಸೋಂಪೂರ, ಮಲ್ಲಿಕಾರ್ಜುನ ಇದ್ಲಿ, ಭೀಮಪ್ಪ ರಾಮಜಿ, ಮಲ್ಲಪ್ಪ ಮಳಗೊಂಡ, ಬಾಳಪ್ಪ ಗಂಗರಾತ್ರಿ ಶರಣಪ್ಪ ಜೋಗಿನ, ಹಕರಿಯಪ್ಪ ಬಾಬರಿ, ಸಂಗಪ್ಪ ಮಳ್ಳಿ, ಸೋಮಪ್ಪ ಜೋಗಿನ, ರಾಮಪ್ಪ ಗುಡ್ಲಾನೂರ, ವೆಂಕಟೇಶ ಸತ್ಯಪ್ಪನವರ ಮುಂತಾದ ರೈತರು ಪಾಲ್ಗೊಂಡಿದ್ದರು.

ಹಿಂಗಾರು ಹಂಗಾಮು ಈಗಷ್ಟೇ ಪ್ರಾರಂಭವಾಗುತ್ತಿದ್ದು, ರೈತರು ತಮ್ಮ ಭೂಮಿಯನ್ನು ಉಳುಮೆ ಮಾಡಿ ಸಂಪೂರ್ಣವಾಗಿ ತೇವಗೊಂಡ ನಂತರ ಬೀಜಗಳನ್ನು ಬೀಜೋಪಚಾರ ಮಾಡಿ ಬಿತ್ತುವುದರಿಂದ ಹೆಚ್ಚು ಇಳುವರಿ ಪಡೆಯಲು ಸಾಧ್ಯವಾಗುತ್ತದೆ ಎಂದು ವೀರಣ್ಣ ಗಡಾದ ಹೇಳಿದರು.

# ಸಹಕಾರ ಸಂಘಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ 01–01–2025ರಿಂದ 31–12–2025ರವರೆಗೆ ಆಡಳಿತ ಮಂಡಳಿಗೆ ಅವಧಿ ಕೊನೆಗೊಳ್ಳುವ ಎಲ್ಲಾ ವಿಧದ ಸಹಕಾರ/ಸಹಕಾರಿಗಳು/ಬ್ಯಾಂಕುಗಳ ಚುನಾವಣೆ ಜರುಗಿಸುವುದು ಅವಶ್ಯವಿದ್ದು, ಆಯಾ ಸಂಘ/ಬ್ಯಾಂಕ್/ಸಹಕಾರಿಗಳ ಮುಖ್ಯ ಕಾರ್ಯನಿವಾಹಕರು ಕೂಡಲೇ ರಿಟರ್ನಿಂಗ್ ಅಧಿಕಾರಿಗಳ ನೇಮಕಾತಿಗಾಗಿ ಪ್ರಸ್ತಾವನೆಗಳನ್ನು ನಿಗದಿತ ನಮೂನೆಯಲ್ಲಿ ಸಹಕಾರ ಸಂಘಗಳ ಉಪ/ಸಹಾಯಕ ನಿಬಂಧಕರ ಕಚೇರಿ ಗದಗ ಈ ಕಚೇರಿಗಳಿಗೆ 4 ತಿಂಗಳುಗಳ ಮೊದಲೇ ಸಲ್ಲಿಸಬೇಕು. ಕರ್ನಾಟಕ ಸಹಕಾರ ಸಂಘಗಳ ಹಾಗೂ ಸೌಹಾರ್ದ ಕಾಯ್ದೆಯಡಿ ಇತ್ತೀಚಿನ ತಿದ್ದುಪಡಿ ಅನುಸಾರ ಉಪನಿಯಮಗಳನ್ನು ತಿದ್ದುಪಡಿ ಮಾಡಿಕೊಂಡು ಪ್ರಸ್ತಾವನೆಯೊಂದಿಗೆ ಸಲ್ಲಿಸಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ ಜಿಲ್ಲಾಡಳಿತ ಭವನ ಕೊಠಡಿ ಸಂಖ್ಯೆ–125 ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಎ.ಪಿ.ಎಂ.ಸಿ ಯಾರ್ಡ್, ಎಸ್.ಬಿ.ಆಯ್ ಮುಖ್ಯ ಶಾಖೆ ಎದುರಿಗೆ, ಗದಗ ಕಚೇರಿಗೆ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಬಹುದಾಗಿದೆ ಎಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್‌ಎಸ್‌ಕೆ ಸಮಾಜದ ನಮ್ಮೂರು ದಸರಾದಲ್ಲಿ ರಾಜ್ಯಸಭಾ ಸದಸ್ಯ ನಾರಾಯಣಸಾ ಬಾಂಡಗೆ

# ಸಮಾಜ ಬಾಂಧವರು ಸಂಘಟಿತರಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಎಸ್.ಕೆ ಸಮಾಜ ಚಿಕ್ಕ ಸಮಾಜವಾದರೂ ಎಲ್ಲರೊಂದಿಗೆ ಉತ್ತಮ ಬಾಂಧವ್ಯದೊಂದಿಗೆ ಬದುಕುತ್ತಿರುವದು ಸ್ವಾಗತಾರ್ಹವಾಗಿದೆ ಎಂದು ರಾಜ್ಯಸಭಾ ಸದಸ್ಯ, ಬಾಗಲಕೋಟೆಯ ನಾರಾಯಣಸಾ ಬಾಂಡಗೆ ಹೇಳಿದರು.

ನಗರದ ಹಳೇ ಸರಾಫ್ ಬಜಾರದ ಶ್ರೀ ಜಗದಂಬಾ ದೇವಸ್ಥಾನದ ಬಾಸ್ಕರಸಾ ಪವಾರ ಸಭಾಂಗಣದ ದಸರಾ ದರಬಾರ ವೇದಿಕೆಯಲ್ಲಿ ಜರುಗಿದ 'ನಮ್ಮೂರು ದಸರಾ-2024' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಎಸ್‌ಎಸ್‌ಕೆ ಸಮಾಜ ಬಾಂಧವರು ಗದಗ ನಗರದಲ್ಲಿ ನಡೆಯುವ ಪ್ರತಿಯೊಂದು ಧಾರ್ಮಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ಪಾಲ್ಗೊಂಡು ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸುತ್ತಾ ಬಂದಿರುವುದು ವಿಶೇಷವಾಗಿದೆ. ಗದುಗಿನ ಎಸ್‌ಎಸ್‌ಕೆ ಸಮಾಜದಲ್ಲಿ ಸುಶಿಕ್ಷಿತರು ಹಾಗೂ ಸಂಸ್ಕಾರವಂತರು ಹೆಚ್ಚಿನ ಪ್ರಮಾಣದಲ್ಲಿ ಇರುವದರಿಂದ ಅವರೆಲ್ಲರೂ ಇತರರಿಗೆ ಪ್ರೋತ್ಸಾಹ ನೀಡಿ ಬೆಳೆಸುತ್ತಿರುವುದು ಹೆಮ್ಮೆಯ ವಿಷಯ. ದೇವಿಯ ಆಶೀರ್ವಾದದಿಂದ ನಾನೂ ರಾಜ್ಯಸಭಾ ಸದಸ್ಯನಾಗಿದ್ದೇನೆ. ಮುಂದಿನ ದಿನಗಳಲ್ಲಿ ಸಮಾಜಕ್ಕೆ ಸರಕಾರದ ಸವಲತ್ತುಗಳನ್ನು ಕೊಡಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಎಲ್ಲರೂ ಸಂಘಟಿತರಾಗಿ ಸಮಾಜವನ್ನು ಗಟ್ಟಿಗೊಳಿಸಬೇಕು. ಮಕ್ಕಳಿಗೆ ಸಂಸ್ಕಾರ ಮನೆಯಿಂದಲೇ ಆರಂಭವಾಗಬೇಕು. ಈ ನಿಟ್ಟಿನಲ್ಲಿ ಮಹಿಳೆಯರು ಹೆಚ್ಚು ಕಾರ್ಯಪ್ರವೃತ್ತರಾಗಬೇಕು ಎಂದು ಹೇಳಿದರು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಎಸ್.ಎಸ್.ಕೆ ಸಮಾಜ ಪಂಚ ಕಮಿಟಿ ಅಧ್ಯಕ್ಷ ಫಕೀರಸಾ ಬಾಂಡಗೆ ವಹಿಸಿದ್ದರು. ರವಿ ಶಿದ್ಲಿಂಗ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆ ಮೇಲೆ ಪಂಚ ಕಮಿಟಿಯ ಉಪಾಧ್ಯಕ್ಷ ರಾಜು ಬದಿ, ದಸರಾ ಕಮಿಟಿಯ ಚೇರಮನ್ ವಿಷ್ಣುಸಾ ಶಿದ್ಲಿಂಗ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಪಂಚ ಕಮಿಟಿಯ ಸದಸ್ಯರಾದ ಎನ್.ಆರ್. ಖಟವಟೆ, ವಿಶ್ವನಾಥಸಾ ಖಟವಟೆ, ಸುರೇಶಕುಮಾರ ಬದಿ, ಬಲರಾಮ ಬಸವಾ, ಮೋತಿಲಾಲಸಾ ಪೂಜಾರಿ, ಮಾರುತಿ ಪವಾರ, ಶ್ರೀನಿವಾಸ ಬಾಂಡಗೆ, ಶ್ರೀಕಾಂತ ಖಟವಟೆ, ಪರಶುರಾಮಸಾ ಬದಿ, ಗಣಪತಸಾ ಜಿತೂರಿ, ವಿನೋದ ಬಾಂಡಗೆ, ಪ್ರಕಾಶ ಬಾಕಳೆ, ಗಂಗಾಧರ ಹಬೀಬ, ಅನಿಲ್ ಖಟವಟೆ, ಅಂಬಾಸಾ ಖಟವಟೆ, ವಿಶ್ವನಾಥ ಸೂಳಂಕಿ, ಸಾಗರ ಪವಾರ, ರಾಘವೇಂದ್ರ ಬಾಂಡಗೆ, ಸತೀಶ ದವಳೆ, ಶ್ರೀಕಾಂತ ಬಾಕಳೆ, ಮೋಹನಸಾ ಪವಾರ, ನಾಗರಾಜ ಖೋಡೆ, ಮಾಧು ಬದಿ, ಉಮಾಬಾಯಿ ಬೇವಿನಕಟ್ಟಿ, ಸ್ನೇಹಲತಾ ಕಬಾಡಿ ಮುಂತಾದವರು ಉಪಸ್ಥಿತರಿದ್ದರು. ಜಿ.ಎನ್. ಹಬೀಬ ನಿರೂಪಿಸಿದರು. ಸುಧೀರ ಕಾಟೀಗರ ವಂದಿಸಿದರು.

ಎಸ್.ಎಸ್.ಕೆ ಸಮಾಜದ ಗೌರವ ಕಾರ್ಯದರ್ಶಿ ವಿನೋದ ಶಿದ್ಲಿಂಗ ಮಾತನಾಡಿ, ಎಸ್‌ಎಸ್‌ಕೆ ಸಮಾಜಕ್ಕೆ ದಸರಾ ಹಬ್ಬ ವಿಶೇಷವಾಗಿದೆ. ಹಿಂದಿನ ಹಿರಿಯರು ಸಮಾಜಕ್ಕೆ ಭದ್ರ ಬುನಾದಿ ಹಾಕಿ ದಸರಾ ಹಬ್ಬಕ್ಕೆ ಹೊಸ ಮೆರಗು ನೀಡಿದ್ದಾರೆ. ಈಗಾಗಲೇ ನಗರದಲ್ಲಿ ಸಮಾಜದ ವತಿಯಿಂದ ಮೂರು ದೇವಸ್ಥಾನ, ಎರಡು ಕಲ್ಯಾಣ ಮಂಟಪ, ಒಂದು ಶಾಲೆಯನ್ನು ನಿರ್ಮಿಸಿ ಸಮಾಜಕ್ಕೆ ಕೊಡುಗೆ ನೀಡಿದ್ದಾರೆ. ನಮ್ಮೂರ ದಸರಾವನ್ನು ಅದ್ದೂರಿಯಾಗಿ ಆಚರಿಸಲು ಸಮಾಜದ ಗುರು-ಹಿರಿಯರು, ಮಹಿಳಾ ಮಂಡಳದವರು ಹಾಗೂ ದಸರಾ ಮಹೋತ್ಸವದ ಪದಾಧಿಕಾರಿಗಳ ಸಹಕಾರ ಮುಖ್ಯವಾಗಿದೆ ಎಂದು ಹೇಳಿದರು.

# ಮನವಿಗೆ ಸ್ಪಂದಿಸಿದ ಹೆಸ್ಕಾಂ ಎಂ.ಡಿ

■ವಿಜಯಸಾಕ್ಷಿ ಸುದ್ದಿ, ಗದಗ



ಸ್ಥಳೀಯ ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಸರ್ಕಾರಿ ಪ್ರೌಢಶಾಲೆ ಸಿದ್ದಲಿಂಗ ನಗರದ ಮುಂಭಾಗದ ಸ್ಥಳದಲ್ಲಿರುವ, ನಿತ್ಯ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ನೂರಾರು ಸಾರ್ವಜನಿಕರು ಓಡಾಡುವ ರಸ್ತೆಯ ಬದಿಯಲ್ಲಿರುವ ಟಿ.ಸಿ ಸುತ್ತಲೂ ಫೆನ್ಸಿಂಗ್ ಇಲ್ಲದೆ ಇರುವುದರಿಂದ ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಸುರಕ್ಷತೆ ದೃಷ್ಟಿಯಿಂದ ತೊಂದರೆಯಾಗಿತ್ತು.

ಈ ಸಂಗತಿಯನ್ನು ಹೆಸ್ಕಾಂ .ಎಂ.ಡಿ ಆಗಿರುವ ವೈಶಾಲಿ ಎಮ್.ಎಲ್ ಅವರಿಗೆ ಮನವಿ ಮಾಡಿಕೊಂಡಾಗ ತಕ್ಷಣ ಸ್ಪಂದಿಸಿ ಟಿ.ಸಿ ಸುತ್ತಲೂ ಫೆನ್ಸಿಂಗ್ ಅಳವಡಿಸುವ ವ್ಯವಸ್ಥೆ ಮಾಡಿರುವುದರಿಂದ ಸಾವಿರಾರು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಉಪಯುಕ್ತವಾಗಿದೆ. ತಕ್ಷಣ ಈ ಸಮಸ್ಯೆಗೆ ಸ್ಪಂದಿಸಿದ ವೈಶಾಲಿ ಅವರಿಗೆ, ಗದಗ ವಿಭಾಗದ ಹೆಸ್ಕಾಂ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿ ವರ್ಗದವರಿಗೆ ಶಾಲೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳ ಪರವಾಗಿ ಸರಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಕೃತಜ್ಞತೆ ಸಲ್ಲಿಸಿದ್ದಾರೆ.


# ಧರ್ಮ ಸಮ್ಮೇಳನದಲ್ಲಿ ಚಿಣ್ಣರ ಕಲರವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೇರಿಯಲ್ಲಿ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನದಲ್ಲಿ ದೊಡ್ಡವರಿಗೆ ರಂಭಾಪುರಿ ಜಗದ್ಗುರುಗಳವರ ಆಶೀರ್ವಚನ ಸಂದೇಶ, ಶ್ರೀಗಳವರ ಆಶೀರ್ವಾದದ ನುಡಿಗಳು, ಸಾಧಕರ ನುಡಿಗಳು, ಉಪನ್ಯಾಸಗಳು ಮುಂತಾದ ವಿಶೇಷ ಕಾರ್ಯಕ್ರಮಗಳು ಮನ ಸೆಳೆಯುತ್ತಿವೆ.

ದೊಡ್ಡವರೆಲ್ಲರೂ ಸಂಜೆ ಆಗುವುದನ್ನೇ ಕಾಯುತ್ತಿದ್ದರೆ, ಚಿಕ್ಕವರ ಮನರಂಜನೆಗೂ ಇಲ್ಲಿ ವ್ಯವಸ್ಥೆಯಾಗಿದೆ.

ಸಂಜೆ ವೇಳೆ ಜನರನ್ನು ಆಕರ್ಷಿಸಲು ಬಗೆಬಗೆಯ ಜೋಕಾಲಿಗಳು ತಲೆ ಎತ್ತಿವೆ.



ಅದರಲ್ಲಿ ಆಟ ಆಡಲು ಚಿಣ್ಣರು ತುದಿಗಾಲ ಮೇಲೆ ನಿಂತಿದ್ದಾರೆ.

ಸಂಜೆ ಆದರೆ ಸಾಕು ಕುಟುಂಬ ಸಮೇತ ಆಗಮಿಸುವವರಿಗೆ ಬಣ್ಣ ಬಣ್ಣದ ವಿದ್ಯುತ್ ದೀಪಾಲಂಕಾರ ಸ್ವಾಗತ ಕೋರುತ್ತಿವೆ. ಕೆಲವರು ನಾನಾ ವಸ್ತುಗಳ ಖರೀದಿಯ ಸಂಭ್ರಮದಲ್ಲಿ ಮುಳುಗಿದ್ದರೆ, ಸಣ್ಣ ಮಕ್ಕಳು ಜೋಕಾಲಿ, ಬ್ರೇಕ್ ಡ್ಯಾನ್ಸ್, ಜೈಂಟ್ ವ್ಹೀಲ್, ಜಂಪಿಂಗ್ ಜಪಾಂಗ್ ಆಟ ಆಡುವ ಮೂಲಕ ಭರ್ಜರಿ ಮನರಂಜನೆ ಪಡೆಯುತ್ತಿದ್ದಾರೆ. ಗುರುನಾಥ ವಳಗಲೆ ಹಾಗೂ ಬಸವರಾಜ ಎಚ್. ಅವರು ದಸರಾ ದರ್ಬಾರ್‌ನಲ್ಲಿ ಮಕ್ಕಳಿಗಾಗಿ ಬಗೆಬಗೆಯ ಜೋಕಾಲಿಗಳನ್ನು ಅಳವಡಿಸಿದ್ದಾರೆ.

# ಶ್ರೀ ದ್ಯಾಮಮ್ಮ ದೇವಸ್ಥಾನದಲ್ಲಿ ಚಂಡಿಕಾ ಹೋಮ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸಮಿಪದ ತಿಮ್ಮಾಪೂರ ಗ್ರಾಮದಲ್ಲಿ ನವರಾತ್ರಿಯ ಅಂಗವಾಗಿ ದ್ಯಾಮಮ್ಮ ದೇವಿಗೆ ವಿಶೇಷ ಪೂಜೆ ಹಾಗೂ ಹೋಮ-ಹವನ ಕಾರ್ಯಕ್ರಮಗಳು ನಡೆದವು.

ಹುಬ್ಬಳ್ಳಿಯ ಪಂಡಿತ ಗಂಗಾಧರ ಭಟಶಾಸ್ತ್ರೀ ಹಾಗೂ ಸಂಗಡಿಗರು ಸೇರಿ ಶ್ರೀ ದ್ಯಾಮಮ್ಮ ದೇವಿಯ ಗುಡಿಯ ಆವರಣದಲ್ಲಿ ಚಂಡಿಕಾ ಹೋಮವನ್ನು ಸಲ್ಲಿಸಿ, ಗ್ರಾಮಕ್ಕೆ ಸಕಲ ಭಾಗ್ಯಗಳು ದೊರೆಯಲಿ ಎಂದು ದೇವಿಯಲ್ಲಿ ಪ್ರಾರ್ಥಿಸಿದರು.



ಪೂಜಾ ಕಾರ್ಯಕ್ರಮಗಳ ನಂತರ ಮಧ್ಯಾಹ್ನ ಮಹಾ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ಗ್ರಾಮದ ಹಿರಿಯರಾದ ರಾಮನಗೌಡ ದೇಸಾಯಿ, ಸಂಗಪ್ಪ ಮಳ್ಳಿ, ಯಲ್ಲಪ್ಪ ಎಚ್.ಬಾಬರಿ, ಶರಣಪ್ಪ ಜೋಗಿನ, ರಮೇಶ ಜೋಗಿನ, ಅಡಿವೆಪ್ಪ ಜೋಗಿನ, ಕರಿಯಪ್ಪ ಬಾಬರಿ ರಾಮಣ್ಣ ಗಾಣದ, ಶ್ರೀಕಾಂತ ಪೂಜಾರ, ಬಸಪ್ಪ ಸತ್ಯಪ್ಪನವರ, ಚಿನ್ನಪ್ಪ ಬಿಸನಳ್ಳಿ, ಶೇಖಪ್ಪ ಪೂಜಾರ, ರಮೇಶ ಜೋಗಿನ, ಹುಚ್ಚೀರಪ್ಪ ಬಾಬರಿ, ಅಚ್ಚಕಾರದ ಬಸಪ್ಪ ಬಡಿಗೇರ, ಮಂಜು ಬಡಿಗೇರ ಸೇರಿದಂತೆ ಭಕ್ತಾದಿಗಳು ಪಾಲ್ಗೊಂಡಿದ್ದರು.

# ದುರ್ಗಾದೌಡ ಕಾರ್ಯಕ್ರಮಕ್ಕೆ ವಿಶೇಷ ಆಕರ್ಷಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ದಸರಾ ಉತ್ಸವ ಕಾರ್ಯಕ್ರಮಗಳು ಬಹುತೇಕ ಎಲ್ಲ ದೇವಸ್ಥಾನಗಳಲ್ಲಿ ಸಾಂಪ್ರದಾಯಿಕವಾಗಿ ನೆರವೇರುತ್ತಿದ್ದು, ವಿಶೇಷ ಪೂಜೆ, ಪುರಾಣ ಪ್ರವಚನಗಳು ನಡೆಯುತ್ತಿವೆ. ಈ ನಿಟ್ಟಿನಲ್ಲಿ ಕಳೆದೆರಡು ವರ್ಷಗಳಿಂದ ನಡೆಯುತ್ತಿರುವ ದುರ್ಗಾದೌಡ ಕಾರ್ಯಕ್ರಮ ಮೂರನೇ ವರ್ಷ ದಿನದಿಂದ ದಿನಕ್ಕೆ ಜನರನ್ನು ಆಕರ್ಷಿಸುತ್ತಿದೆ.

ಶನಿವಾರ ದುರ್ಗಾದೌಡ ಕಾರ್ಯಕ್ರಮದ ಮೆರವಣಿಗೆ ಕೆಂಚಲಾಪುರ ಓಣಿಯ ಬನಶಂಕರಿ ದೇವಸ್ಥಾನದಿಂದ ಪ್ರಾರಂಭಗೊಂಡು ಬಜಾರ ಮಾರ್ಕೆಟ್‌ನ ಕೆಮ್ಮಮ್ಮ ದೇವಿ ದೇವಸ್ಥಾನದಲ್ಲಿ ಸಂಪನ್ನಗೊಂಡಿತು. ಪ್ರತಿಯೊಬ್ಬರೂ ಕೇಸರಿ ಧ್ವಜ ಹಿಡಿದು ಸಾಗಿದರು. ಕಾರ್ಯಕ್ರಮದ ರೂವಾರಿ ಗುರುನಾಥ ದಾನಪ್ಪನವರ ಮಾತನಾಡಿ, ಹಿಂದೂ ಯುವಕ-ಯುವತಿಯರಲ್ಲಿ ನಮ್ಮ ಧರ್ಮದ ಬಗ್ಗೆ ಪೂಜ್ಯ ಭಾವ ಬರಬೇಕು. ಹಿಂದೂ ಧರ್ಮದ ಕುರಿತು ಜಾಗೃತಿ ಮೂಡಿಸುವುದು ದುರ್ಗಾದೌಡ ಕಾರ್ಯಕ್ರಮದ ಉದ್ದೇಶವಾಗಿದೆ.



ನಮ್ಮ ಸಂಸ್ಕೃತಿ, ಪರಂಪರೆ, ಇತಿಹಾಸ ಇವುಗಳನ್ನು ಮುಂದಿನ ಪೀಳಿಗೆಗೂ ಪರಿಚಯಸಲು ಇಂತಹ ಕಾರ್ಯಕ್ರಮಗಳು ಅವಶ್ಯಕವಾಗಿದ್ದು, ಈ ನವರಾತ್ರಿ ಉತ್ಸವದಲ್ಲಿ ಶಕ್ತಿ ದೇವತೆಗಳನ್ನು ಪೂಜಿಸುವುದು ಹಬ್ಬದ ವಿಶೇಷವಾಗಿದೆ. ಈ ನಿಟ್ಟಿನಲ್ಲಿ ಯುವಕ-ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಚಂಬಣ್ಣ ಬಾಳಿಕಾಯಿ, ಪುರಸಭೆ ಸದಸ್ಯ ಮಹೇಶ ಹೊಗೆಸೊಪ್ಪಿನ, ಬಸವರಾಜ ಅರಳಿ, ಗಂಗಾಧರ ಮೆಣಸಿನಕಾಯಿ, ತಿಪ್ಪಣ್ಣ ಸಂಶಿ, ದಸರಾ ಸಮಿತಿ ಅಧ್ಯಕ್ಷ ದೇವಪ್ಪ ಗಡೇದ, ಕಾರ್ಯದರ್ಶಿ ಮಲ್ಲನಗೌಡ ಪಾಟೀಲ, ರವಿ ಲಿಂಗಶೆಟ್ಟಿ, ಪ್ರಶಾಂತ ಪೋತದಾರ, ರಾಜೇಶ್ವರಿ ದಾನಪ್ಪನವರ, ನಾಗರತ್ನ ನಾಗಲೋಟಿ ಸೇರಿದಂತೆ ಅನೇಕರಿದ್ದರು.

# ಶಿಕ್ಷಣದೊಂದಿಗೆ ಗ್ರಾಮಾಭಿವೃದ್ಧಿಯ ಕಲ್ಪನೆ ಮೂಡಲಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಯುವ ಸಮೂಹವು ಗ್ರಾಮಗಳಲ್ಲಿ ನೈರ್ಮಲ್ಯ, ಆರೋಗ್ಯ ಹಾಗೂ ಶಿಕ್ಷಣದ ಪ್ರಾಮುಖ್ಯತೆಯನ್ನು ಗ್ರಾಮಸ್ಥರಲ್ಲಿ ಮೂಡಿಸಲು ಮುಂದಾಗಬೇಕು ಎಂದು ತಾ.ಪಂ ಮಾಜಿ ಉಪಾಧ್ಯಕ್ಷ ಶಶಿಧರ ಹೂಗಾರ ಹೇಳಿದರು.

ಸಮೀಪದ ಕಾಲಕಾಲೇಶ್ವರ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಪಟ್ಟಣದ ಎಸ್.ಎಂ. ಭೂಮರಡ್ಡಿ ಪದವಿಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಶಿಬಿರ ಉದ್ಘಾಟಿಸಿ ಮಾತನಾಡಿದರು.

ದೇಶದ ಉಜ್ವಲ ಭವಿಷ್ಯದ ನಿರ್ಮಾತೃಗಳಾದ ಯುವ ಪೀಳಿಗೆ ಶಿಕ್ಷಣದೊಂದಿಗೆ ಗ್ರಾಮಾಭಿವೃದ್ಧಿಯ ಪರಿಕಲ್ಪನೆ ಪಡೆದುಕೊಂಡು, ಬದುಕಿಗೆ ಬೇಕಾದ ಮೌಲ್ಯಯುತ ಶಿಕ್ಷಣ ಪಡೆಯಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ. ಕಾಲಕಾಲೇಶ್ವರ ಗ್ರಾಮವು ಐತಿಹಾಸಿಕ ಹಿನ್ನೆಲೆ ಹೊಂದಿದೆ. ಇಲ್ಲಿನ ಕಾಲಭೈರವನ ದೇವಸ್ಥಾನವು ದಕ್ಷಿಣಕಾಶಿ ಎಂದು ಪ್ರಸಿದ್ಧಿ ಪಡೆದಿದ್ದು, ಗ್ರಾಮದಲ್ಲಿನ ಪುಷ್ಕರಣಿ ಸೇರಿ ಅನೇಕ ಇತಿಹಾಸವಿದೆ. ಹೀಗಾಗಿ ಗ್ರಾಮದಲ್ಲಿ ನಡೆಯುತ್ತಿರುವ ಶಿಬಿರದಲ್ಲಿ ಪಾಲ್ಗೊಂಡಿರುವ ಶಿಬಿರಾರ್ಥಿಗಳು ನೈರ್ಮಲ್ಯ, ಆರೋಗ್ಯ ಹಾಗೂ ಶಿಕ್ಷಣದ ಪ್ರಾಮುಖ್ಯತೆಯನ್ನು ಗ್ರಾಮಸ್ಥರಲ್ಲಿ ಮೂಡಿಸಲು ಶ್ರಮಿಸಿ, ಗ್ರಾಮಗಳು ಸ್ವಚ್ಛ ಹಾಗೂ ಸುಂದರ ಗ್ರಾಮಗಳನ್ನಾಗಿ ನಿರ್ಮಿಸಲು ಪ್ರಯತ್ನಿಸಬೇಕು. ರಾಷ್ಟ್ರ ಮತ್ತು ರಾಜ್ಯದ ಅಭಿವೃದ್ಧಿಯಲ್ಲಿ ನೈಜ ಸಮಾಜಸೇವೆಯಲ್ಲಿ ತೊಡಗಿಸಿಕೊಂಡು ದೇಶದ ಪ್ರಗತಿಗೆ ಕೈಜೋಡಿಸಬೇಕು ಎಂದರು.



ಪ್ರಾಚಾರ್ಯ ಜೆ.ಬಿ. ಗುಡಿಮನಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನಾ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಪ್ರಾಮಾಣಿಕತೆ, ಸಾಮಾಜಿಕ ಸೇವಾಗುಣ, ನಾಯಕತ್ವ ಗುಣದ ಜತೆಗೆ ಸಹಬಾಳ್ವೆ ಮತ್ತು ಸಮುದಾಯ ಅಭಿವೃದ್ಧಿ ಸೇರಿ ಅನೇಕ ಮೌಲ್ಯಗಳನ್ನು ಕಲಿಸಿಕೊಡಲು ಸಹಕಾರಿ ಎಂದರು.

ರಾಜೂರ ಗ್ರಾ.ಪಂ ಸದಸ್ಯ ಮುತ್ತಣ್ಣ ತಳವಾರ, ಎಸ್‌ಡಿಎಂಸಿ ಅಧ್ಯಕ್ಷ ಕಳಕಪ್ಪ ತಳವಾರ, ಪರಶುರಾಮ ಚಿಲ್‌ಝರಿ, ಮೃತ್ಯುಂಜಯ ಹಿರೇಮಠ, ಶಿಬಿರಾಧಿಕಾರಿ ಎಸ್.ಎಸ್. ವಾಲಿಕಾರ, ಜ್ಯೋತಿ ಎಸ್, ವಾಯ್.ಆರ್. ಸಕ್ರೋಜಿ, ಎಸ್.ಎಂ. ಹುನಗುಂದ, ಪ್ರೇಮಾ ಚುಂಚಾ ಮುಂತಾದವರಿದ್ದರು.

# ಹರ್ಲಾಪುರದಲ್ಲಿ ಶಿವಾನುಭವ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಮಾಜಮುಖಿ ಕಾರ್ಯಗಳನ್ನು ಮಾಡುತ್ತಾ ಬಂದಿರುವ ಮಹನೀಯರನ್ನು ಗೌರವಿಸುವುದು ಶ್ರದ್ಧಾ ಕೇಂದ್ರಗಳ ಜವಾಬ್ದಾರಿಯಾಗಿದ್ದು, ಈ ನಿಟ್ಟಿನಲ್ಲಿ ಶ್ರೀಮಠವು ಕಳೆದ ಹಲವು ವರ್ಷಗಳಿಂದ ಈ ಸಂಪ್ರದಾಯವನ್ನು ಬೆಳೆಸಿಕೊಂಡು ಬಂದಿದೆ ಎಂದು ಹರ್ಲಾಪೂರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹೇಳಿದರು.

ಸಮೀಪದ ಕೊಟ್ಟೂರೇಶ್ವರ ಮಠದಲ್ಲಿ ಹಮ್ಮಿಕೊಂಡಿದ್ದ 301ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ದೇಶ ರಕ್ಷಣೆ, ಕೃಷಿ, ಶೈಕ್ಷಣಿಕ, ಆರೋಗ್ಯ, ಆಧ್ಯಾತ್ಮಿಕ ಕ್ಷೇತ್ರ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರನ್ನು ಶ್ರೀಮಠವು ಸನ್ಮಾನಿಸಿ ಗೌರವಿಸುತ್ತಿದೆ.



ಮನುಷ್ಯ ತಮ್ಮ ವೈಯಕ್ತಿಕ ಬದುಕಿಗಿಂತ ಸಾಮಾಜಿಕ ಸೇವೆಗೆ ಹೆಚ್ಚು ಒತ್ತು ನೀಡಿದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ ಎಂದು ಸಲಹೆ ನೀಡಿದರು.

ಮುಖ್ಯ ಅಥಿತಿಯಾಗಿ ಆಗಮಿಸಿದ್ದ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಶುದ್ಧ ಗಂಗಾ ವಿಭಾಗದ ನಿಯೋಜಕ ಧರ್ಮಣ್ಣ ಭೋವೇರ್ ಮಾತನಾಡಿ, ಪುರಾಣ, ಪುಣ್ಯ ಕತೆ, ಆಧ್ಯಾತ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ಬದುಕಿನಲ್ಲಿ ಬರುವ ಹಲವಾರು ಸಮಸ್ಯೆಗಳಿಗೆ ಪರಿಹಾರ ತಿಳಿಯುತ್ತದೆ. ಆದ್ದರಿಂದ ತನು, ಮನ, ಧನದಿಂದ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು ಎಂದರು.

ಚಂದ್ರು ಕೊಂಗವಾಡ ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯ ಕೆ.ಬಿ. ಕೊಣ್ಣೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ನಿವೃತ್ತ ಶಿಕ್ಷಕ ರಾಮಣ್ಣ ಬೆಳಧಡಿ ಸ್ವಾಗತಿಸಿದರು.

ವೆಂಕಟೇಶ ಜುಂಜಣಿ ನಿರೂಪಿಸಿದರು. ಡಾ ಎಸ್.ಸಿ. ಸರ್ವಿ ವಂದಿಸಿದರು.

# ಮನೆಯ ಪರಿಸ್ಥಿತಿ ಅರಿತು ಜೀವಿಸಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಸ್ವಾತಂತ್ರ್ಯನಂತರ ಗಾಂಧೀಜಿಯ ಕನಸಾದ ಗ್ರಾಮ್ ಸ್ವರಾಜ್ ಯೋಜನೆ, ಸ್ವಚ್ಛತೆ ಹಾಗೂ ವ್ಯಸನಮುಕ್ತ ರಾಷ್ಟ್ರದ ಕನಸನ್ನು ನೆರವೇರಿಸಲು ಯಾವ ಸರ್ಕಾರಗಳೂ ನಿರ್ಧರಿಸಲಿಲ್ಲ ಎಂದು ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಜಿಲ್ಲಾಧ್ಯಕ್ಷ ಅರವಿಂದ ಪಿ.ಎಸ್. ತಿಳಿಸಿದರು.

ಪಟ್ಟಣದ ತರಳಬಾಳು ಕಲ್ಯಾಣಮಂಟಪದಲ್ಲಿ ಶನಿವಾರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಘ ಹಾಗೂ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಸಹಯೋಗದಲ್ಲಿ ಗಾಂಧಿಸ್ಮೃತಿ ಮತ್ತು ಪಾನಮುಕ್ತ ಸಾಧಕರಿಗೆ ಅಭಿನಂದನೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಗ್ರಾಮಗಳ ಅಭಿವೃದ್ಧಿಯಾದರೆ ದೇಶವು ಅಭಿವೃದ್ಧಿ ಹೊಂದುತ್ತದೆ. ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಯನ್ನು ಕಾಪಾಡಬೇಕು. ದೇಶದ ಆರ್ಥಿಕತೆ ಮುನ್ನೆಲೆಗೆ ಬರಲು ಜನರು ವ್ಯಸನಮುಕ್ತರಾಗಿ ಮನೆಯ ಪರಿಸ್ಥಿತಿಯನ್ನು ಅರಿತು ಜೀವಿಸಬೇಕು. ಮಹಿಳೆಯರು ಶಿಕ್ಷಣವಂತರಾಗಿ ಮಕ್ಕಳಿಗೆ ಉತ್ತಮ ಮೌಲ್ಯಗಳನ್ನು ತಿಳಿಯಪಡಿಸಬೇಕು. ಮೊಬೈಲ್‌ನ ಗೀಳು ಹೆಚ್ಚಿಸದೇ ರಾಮಾಯಣ, ಮಹಾಭಾರತ, ಆದರ್ಶ ಪುರುಷರ ಸಾಧನೆಗಳ ಪುಸ್ತಕದ ರುಚಿಯನ್ನು ಮಕ್ಕಳಿಗೆ ಅಂಟಿಸಬೇಕು ಎಂದರು.

ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಟ್ರಸ್ಟ್‌ನ ಸಹಾಯಕ ನಿರ್ದೇಶಕ ಜನಾರ್ಧನ ಎಸ್ ಮಾತನಾಡಿ, ಗಾಂಧೀಜಿಯವರ ಆದರ್ಶ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು, ಸ್ವಾಸ್ಥ್ಯ ಸಮಾಜದ ನಿರ್ಮಾಣವಾಗಲು ಸರ್ವಧರ್ಮೀಯರು ಸಹಕರಿಸಿದಾಗ ಮಾತ್ರ ಸಾಧ್ಯ. ಮದ್ಯಮ ವರ್ಗ ಹಾಗೂ ಹಿಂದುಳಿದ ವರ್ಗದ ಜನತೆಯು ಮುಖ್ಯವಾಹಿನಿಗೆ ಬರಬೇಕೆಂದರೆ ಕುಡಿತದಿಂದ ದೂರವಿದ್ದು ಅದೇ ಹಣದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣವನ್ನು ನೀಡಿ ಉನ್ನತ ಹುದ್ದೆಗಳಿಗೆ ಕಳಿಸಬೇಕು ಎಂದರು.

ಫಾದರ್ ಸಿಲ್ವೇಸ್ಟರ್ ಪಿರೇರಾ, ಮಂಜುನಾಥ ಜಿ.ಬಿ, ಯೋಜನಾಧಿಕಾರಿ ಸುಬ್ರಹ್ಮಣ್ಯ ಮಾತನಾಡಿದರು. ಹೆಚ್. ಚಂದ್ರಪ್ಪ, ವಿಜಯ್ಕುಮಾರ್, ಟಿ.ಎಮ್. ಕೊಟ್ರಯ್ಯ, ಹಾಲೇಶ್, ಲುಸುಮಾ ಜಗದೀಶ್, ಶೈಲಜಾ, ಎನ್.ಎಸ್. ಮಮತಾ, ಹೆಚ್.ಎಂ. ತಿಪ್ಪೇಸ್ವಾಮಿ, ಲತೀಫಸಾಬ್ ಎಮ್.ಡಿ, ಶೋಭಾ ಬಾಗಳಿ ಮುಂತಾದವರಿದ್ದರು.

# ಭಜನಾ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ದಸರಾ ಉತ್ಸವದ ಅಂಗವಾಗಿ ಬೆಟಗೇರಿಯ ಶ್ರೀ ಅಂಬಾಭವಾನಿ ದೇವಸ್ಥಾನದಲ್ಲಿ ಅ.6ರ ಸಾಯಂಕಾಲ 6 ಗಂಟೆಗೆ ಶ್ರೀ ಸತ್ಯ ಸಾಯಿ ಸಮಿತಿ ಗದಗ ಇವರ ವತಿಯಿಂದ ವೇದ ಪಠಣ ಹಾಗೂ ಭಜನಾ ಕಾರ್ಯಕ್ರಮ ಜರುಗುವದು. ಕಾರಣ, ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಮಹಿಳಾ ಮಂಡಳದ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು, ಎಸ್.ಎಸ್.ಕೆ. ಸಮಾಜ ಬಾಂಧವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಬೆಟಗೇರಿ ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಲೋಕನಾಥ ಕಬಾಡಿ ವಿನಂತಿಸಿದ್ದಾರೆ.



ಗದುಗಿನಲ್ಲಿ ನಡೆದ ಪ್ರೌಢಶಾಲೆಗಳ ಜಿಲ್ಲಾ ಮಟ್ಟದ ಕ್ರೀಡಾಕೂಟದ ಬಾಲಕಿಯರ 17 ವರ್ಷದೊಳಗಿನ ವಿದ್ಯಾರ್ಥಿಗಳ ಚದುರಂಗ ಸ್ಪರ್ಧೆಯಲ್ಲಿ ಪಟ್ಟಣದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿನಿ ಅಮೃತವರ್ಷಿಣಿ ಮುಳಗುಂದ ಪ್ರಥಮ ಸ್ಥಾನವನ್ನು ಗಳಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ವಾಲಿಬಾಲ್ ತಂಡವೂ ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನವನ್ನು ಗಳಿಸಿ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದು, ಮುಖ್ಯ ಶಿಕ್ಷಕರಾದ ಪ್ರಭುಗೌಡ ಎಕ್ಕಿಕೊಪ್ಪ, ಸ್ವಾತಿ ಪೈ ಸೇರಿದಂತೆ ಶಿಕ್ಷಕರು, ಆಡಳಿತ ಮಂಡಳಿಯವರು ಸಾಧಕ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

### ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ ತೋಂಟದ ಸಿದ್ಧರಾಮ ಶ್ರೀಗಳ ಅಭಿಮತ

# ವಚನ ಸಾಹಿತ್ಯಕ್ಕೆ ಕಲಬುರ್ಗಿಯವರ ಕೊಡುಗೆ ಅಪಾರ

■ ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ಪ್ರಖ್ಯಾತ ಸಂಶೋಧಕರಾದ ಡಾ. ಎಂ.ಎಂ. ಕಲಬುರ್ಗಿಯವರು ಪರಿಶ್ರಮಿಗಳು ಹಾಗೂ ಪ್ರತಿಭಾನ್ವಿತರು ಆಗಿದ್ದರು. ಕನ್ನಡ ನಾಡಿನಲ್ಲಿ ಅನೇಕ ಸಾಹಿತಿಗಳನ್ನು, ವಿದ್ಯಾರ್ಥಿಗಳನ್ನು ಸಂಶೋಧಕರನ್ನಾಗಿ ರೂಪಿಸುವಲ್ಲಿ ಕಲಬುರ್ಗಿಯವರ ಪಾತ್ರ ಮಹತ್ವದ್ದಾಗಿದೆ. ಕನ್ನಡಕ್ಕೆ, ಲಿಂಗಾಯತ ಧರ್ಮಕ್ಕೆ, ವಚನ ಸಾಹಿತ್ಯಕ್ಕೆ ಅವರ ಕೊಡುಗೆ ಅಪಾರವಾದುದು ಎಂದು ಪೂಜ್ಯ ಡಾ. ತೋಂಟದ ಸಿದ್ಧರಾಮ ಶ್ರೀಗಳು ನುಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2713ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಪೂಜ್ಯರು, ಡಾ. ಎಂ.ಎಂ. ಕಲಬುರ್ಗಿಯವರು ತಮ್ಮ ಬದುಕಿನುದ್ದಕ್ಕೂ ಸಂಶೋಧನೆ, ಕನ್ನಡ ಹಾಗೂ ಬಸವಣ್ಣನನ್ನು ಉಸಿರಾಗಿಸಿಕೊಂಡಿದ್ದರು. ಗದಗ ಮತ್ತು ನಾಗನೂರು ಮಠದ ಪ್ರಕಾಶನ ಸಂಸ್ಥೆಗಳಿಗೆ ಪ್ರೇರಕ ಶಕ್ತಿಯಾಗಿದ್ದರು. ಕರ್ನಾಟಕದಲ್ಲಿ ಹುಟ್ಟಿದ ಏಕೈಕ ಧರ್ಮ ಲಿಂಗಾಯತ ಧರ್ಮ. ಡಾ. ಫ.ಗು. ಹಳಕಟ್ಟಿ, ಆರ್.ಸಿ. ಹಿರೇಮಠ, ಹಾಗೂ ಎಂ.ಎಂ. ಕಲಬುರ್ಗಿಯವರು ಸಂಶೋಧನಾಪೂರ್ವಕವಾಗಿ ವಚನಸಾಹಿತ್ಯವನ್ನು ಸಂಗ್ರಹಿಸಿ, ಸಂಶೋಧಿಸಿ,



ಶರಣಸಾಹಿತ್ಯವನ್ನು ಉಳಿಸಿ ಬೆಳೆಸಿದ್ದಾರೆ ಎಂದರು.

ಯೋಗದಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಚಿನ್ನದ ಪದಕ ಪಡೆದ ಸುಧಾ ಪಾಟೀಲ ಅವರ ಯೋಗ ಸಾಧನೆ ಮೆಚ್ಚುವಂತಹದ್ದು. ಯೋಗ ದರ್ಶನವು ತುಂಬಾ ಮಹತ್ವದ್ದು. ಭಾರತದ ಯೋಗ ಪದ್ಧತಿಯನ್ನು ಇಡೀ ವಿಶ್ವವೇ ಅನುಸರಿಸುತ್ತಿದೆ. ಯೋಗ ದೈಹಿಕ, ಮಾನಸಿಕ ಶಕ್ತಿ ತುಂಬುವ ಕೆಲಸ ಮಾಡುತ್ತದೆ ಎಂದರು.

ಪಿ.ಜಿ ಡಿಪ್ಲೋಮಾ ಇನ್ ಯೋಗ ಸ್ಟಡೀಸ್‌ನಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಿಂದ ಚಿನ್ನದ ಪದಕ ಪಡೆದ ಸುಧಾ ಪಾಟೀಲ ಇವರನ್ನು ಸನ್ಮಾನಿಸಲಾಯಿತು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಇವರಿಂದ ವಚನ ಸಂಗೀತ ನಡೆಯಿತು. ಧರ್ಮಗ್ರಂಥ ಪಠಣವನ್ನು ಕುಸುಮಾ ಬಿ.ಇಟಗಿ ಹಾಗೂ ವಚನ ಚಿಂತನವನ್ನು ಮಲ್ಲಿಕಾರ್ಜುನ ಬಿ.ಇಟಗಿ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ಡಾ. ಎಸ್.ಎಸ್. ಮಹಾದೇವಿ ಸಾ.ಹುಬ್ಬಳ್ಳಿ ಹಾಗೂ ಸೋಮಶೇಖರ ಶಿವಪ್ಪ ಅನೂರಶೆಟ್ರ ಸಾ. ಹಾವೇರಿ ಇವರು ವಹಿಸಿದ್ದರು.

ಶಿವಾನಂದ ಹೊಂಬಳ ಸ್ವಾಗತಿಸಿದರು. ವಿದ್ಯಾವತಿ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷರಾದ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಉಮೇಶ ಪುರದ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮಶೇಖರ ಪುರಾಣಿಕ, ನಾಗರಾಜ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿ ಚೇರಮನ್ ಐ.ಬಿ. ಬೆನಕೊಪ್ಪ ಉಪಸ್ಥಿತರಿದ್ದರು.

ಉಪನ್ಯಾಸಕರಾಗಿ ಆಗಮಿಸಿದ ಗದುಗಿನ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಪ್ರಾಧ್ಯಾಪಕ ಶಿವಪ್ಪ ಕುರಿಯವರು ಡಾ. ಎಂ.ಎಂ. ಕಲಬುರ್ಗಿಯವರ ಸಂಸ್ಮರಣೆ ಕುರಿತು ಮಾತನಾಡುತ್ತ, ದಕ್ಷಿಣದಲ್ಲಿ ಚಿದಾನಂದಮೂರ್ತಿಯವರಿದ್ದಂತೆ ಉತ್ತರಕರ್ನಾಟಕದಲ್ಲಿ ಎಂ.ಎಂ. ಕಲಬುರ್ಗಿಯವರು ಇದ್ದರು. ಪ್ರತಿಯೊಂದನ್ನೂ ಸಂಶೋಧನೆಗೆ ಒಳಪಡಿಸಿ, ಜನರಿಗೆ ತಿಳಿಸುವ ಕೆಲಸ ಮಾಡಿದರು. ಲಿಂಗಾಯತ, ವಚನಸಾಹಿತ್ಯ, ಬಸವಣ್ಣನವರ ಕುರಿತು ವಿಶೇಷ ಸಂಶೋಧನೆ ಅವರದಾಗಿತ್ತು. ವಿಶ್ವವಿದ್ಯಾಲಯದಲ್ಲಿ ಅವರು ಪಂಪಭಾರತ ಪಾಠ ಮಾಡುವುದನ್ನು ನೆನಪಿಸಿಕೊಂಡರು. ಅವರ ಸಂಶೋಧನೆಯ ಪ್ರವೃತ್ತಿ ಕಾವ್ಯಕ್ಕಿಂತಲೂ ಹೆಚ್ಚಿತ್ತು. ಅವರ ಮುಖ್ಯ ಕ್ಷೇತ್ರವೇ ಸಂಶೋಧನೆಯಾಗಿತ್ತು ಎಂದರು.

# ಜಯ ಕರ್ನಾಟಕ ಜನಪರ ವೇದಿಕೆಯ ವಾರ್ಷಿಕೋತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ಜಯ ಕರ್ನಾಟಕ ಜನಪರ ವೇದಿಕೆ ಸ್ಥಾಪನೆಗೊಂಡು ಮೂರು ವರ್ಷಗಳು ಪೂರೈಸಿ ನಾಲ್ಕನೇ ವರ್ಷದ ವಸಂತಕ್ಕೆ ಪಾದಾರ್ಪಣೆ ಮಾಡಿದ ಹಿನ್ನೆಲೆಯಲ್ಲಿ ಶಿರಹಟ್ಟಿಯ ಬೆಳ್ಳಟ್ಟಿ ಗ್ರಾಮದ ಶ್ರೀ ರೇಣುಕಾದೇವಿ ಉದ್ಯಾನವನದಲ್ಲಿ ಗಿಡ ನೆಡುವ ಮೂಲಕ ವಾರ್ಷಿಕೋತ್ಸವ ಆಚರಿಸಲಾಯಿತು.

ಗದಗ ಜಿಲ್ಲಾಧ್ಯಕ್ಷ ಸದಾನಂದ ನಂದನವರ್ ಮಾತನಾಡಿ, ನಮ್ಮ ಸಂಘಟನೆಯು ನೊಂದವರ ಧ್ವನಿಯಾಗಿ ಅವರು ಕಣ್ಣೀರನ್ನು ಒರೆಸುವ ಶಕ್ತಿಯಾಗಿ ಮುನ್ನಡೆಯಲಿದೆ ಎಂದರು. ಶಿರಹಟ್ಟಿ ತಾಲೂಕಾಧ್ಯಕ್ಷ ಸಣ್ಣಯಲಪ್ಪ ಒಳಗೇರಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ವೇದಿಕೆಯ ರಮೇಶ್ ಲಮಾಣಿ, ಮನಸೂರ ಅಹ್ಮದ ಎಮ್.ಗಾಡಗೋಳಿ, ರಾಜಭಕ್ಷಿ ನದಾಫ್, ನಾಗರಾಜ್ ಹಮ್ಮಿಗಿ, ಸಂತೋಷ್ ವಡ್ಡರ್, ಕಿರಣ್ ಪಾಟೀಲ್, ವೆಂಕಟೇಶ್ ಅರೆಗನೂರ್, ಹನುಮಂತ್ ಒಳಗೇರಿ, ಲಕ್ಷ್ಮಣ್ ಒಡವಿ, ವೆಂಕಟೇಶ್ ಬಂಡಿವಡ್ಡರ್, ಹನುಮಂತ ಬೈಲಾಪುರ್, ಕಿರಣ್ ಬಂಡಿವಡ್ಡರ್, ನಾಗರಾಜ್ ದೇವಾಳ್, ಸಂತೋಷ್ ಕರ್ಮಿಟ್ಟಿ, ಗಿರೀಶ್ ವಿನಾಳ, ನವೀನ್ ಹಮ್ಮಿಗಿ, ವಿಠಲ ಹಮ್ಮಿಗಿ, ಕೃಷ್ಣ ಕಲೆವಡ್ಡರ್, ಪ್ರವೀಣ್ ಬಾಲ್ಯಹಸೂರ್, ಅರುಣ್ ಬಂಡಿವಡ್ಡರ್, ರವಿ ಕಲ್ಮನಿ, ರಮೇಶ್ ದೇವಾರ್, ಪ್ರಶಾಂತ್ ಬಂಡಿವಡ್ಡರ್, ಪ್ರಶಾಂತ್, ಆನಂದ್, ನರಸಿಂಹ, ಮಹೇಶ್, ಫಕ್ಕೀರೇಶ, ವೆಂಕಟೇಶ್, ಭೀಮೇಶ್, ಮಂಜು ಕುಮಾರ್, ಆನಂದ್, ಸುರೇಶ್, ಅರುಣ್, ಮುದುಕಪ್ಪ, ಪ್ರಕಾಶ್, ಹರೀಶ್, ಪ್ರಶಾಂತ್, ಚನ್ನಬಸಪ್ಪ ಮೋಡೂರ್ ಮುಂತಾದವರಿದ್ದರು.

### ಶ್ರೀ ಬನ್ನಿ ಮಹಾಕಾಳಿ ದೇವಸ್ಥಾನದ ಕಾರ್ಯಕ್ರಮದಲ್ಲಿ ಪೂಜ್ಯ ಶ್ರೀ ಕಲ್ಲಯ್ಯಜ್ಜನವರು

# ಶ್ರೀದೇವಿ ಪುರಾಣ ಅವಿಸ್ಮರಣೀಯ ಗ್ರಂಥ

■ ವಿಜಯಸಾಕ್ಷಿ ಸುದ್ದಿ, ಗದಗ

ಕನಸಿನಲ್ಲಿ ಕಂಡದ್ದನ್ನೂ ಲೀಲಾಜಾಲವಾಗಿ ಐತಿಹಾಸಿಕ, ಪೌರಾಣಿಕ ಪುರಾಣಗಳನ್ನು ಬರೆಯಿಸಿಕೊಂಡಿದ್ದು ಇಡೀ ಜಗತ್ತಿನಲ್ಲಿ ಯಾವುದಾದರೂ ಇದ್ದರೆ ಅದು ಶ್ರೀದೇವಿ ಪುರಾಣವಾಗಿದೆ. ಈ ಪುರಾಣವನ್ನು ಚಿದಾನಂದವಧೂತರು ತಪಸ್ಸಿಗೆ ಕುಳಿತುಕೊಂಡು ಬರೆದಿದ್ದು, ಅದೊಂದು ಅವಿಸ್ಮರಣೀಯ ಪೌರಾಣಿಕ ಪುರಾಣ ಗ್ರಂಥ. ಈ ಗ್ರಂಥ ಜನರಲ್ಲಿ ದೈವೀಶಕ್ತಿಯನ್ನು ತುಂಬಿಕೊಡುತ್ತಿದ್ದು, ಆ ಮೂಲಕ ಸಂಸ್ಕಾರಯುತ ಬದುಕಿಗೆ ನೆರವಾಗಿದೆ ಎಂದು ಪರಮಪೂಜ್ಯ ಕಲ್ಲಯ್ಯಜ್ಜನವರು ನುಡಿದರು.

ಗದುಗಿನ ರೇಲ್ವೆ ಕ್ವಾರ್ಟರ್ಸ್ ಆವರಣದಲ್ಲಿ ಶ್ರೀ ಬನ್ನಿ ಮಹಾಕಾಳಿ ದೇವಸ್ಥಾನದಲ್ಲಿ ಘಟಸ್ಥಾಪನೆ ಹಾಗೂ ಶ್ರೀ ದೇವಿ ಪುರಾಣ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಆಶೀರ್ವಚನ



ನೀಡುತ್ತಿದ್ದರು.

ಮಕ್ಕಳಲ್ಲಿ ಇಂದು ಮೊಬೈಲ್ ಗೀಳು ಹೆಚ್ಚುತ್ತಿದ್ದು, ಭವಿಷ್ಯದಲ್ಲಿ ಅಪಾಯ ತಂದೊಡ್ಡುವ ಭೀತಿಯಿದೆ. ಬಾಲ್ಯದಲ್ಲಿ ಮಕ್ಕಳಿಗೆ ಸಂಸ್ಕಾರವನ್ನು ಕಲಿಸಿಕೊಡುವ ದೊಡ್ಡ ಜವಾಬ್ದಾರಿ ಪಾಲಕರ ಮೇಲಿದ್ದು, ಪುರಾಣ ಪುಣ್ಯ ಕಥೆಯಲ್ಲಿ ಮಕ್ಕಳೊಂದಿಗೆ ಭಾಗವಹಿಸಿದರೆ ಮಕ್ಕಳಲ್ಲಿ ಸಂಸ್ಕಾರ ಗುಣಗಳು ಬೆಳೆಯುವುದನ್ನು ಕಾಣುತ್ತೀರಿ. 'ಹರ ಮತ್ತು ಗುರುವಿನ' ನಡುವಿನ ಹಾಗೂ 'ಹಣ ಹಾಗೂ ಗುಣ' ಇವುಗಳ ನಡುವಿನ ಅಂತರವನ್ನು ಅತ್ಯಂತ ಮಾರ್ಮಿಕವಾಗಿ ವಿಶ್ಲೇಷಣೆ ಮಾಡಿದರು.

ಇದಕ್ಕೂ ಮೊದಲು ಸಮಾರಂಭದ ಸಾನ್ನಿಧ್ಯ ವಹಿಸಿದ ಪ. ಪೂ. ಶ್ರೀ ಮ. ಘ. ಚ. ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಈ ಆವರಣದಲ್ಲಿ ನಡೆಯಲಿರುವ ಶ್ರೀದೇವಿ ಪುರಾಣ ಯಶಸ್ವಿಯಾಗಲಿ ಎಂದು ಹರಸಿದರು.

ನಿವೃತ್ತ ಪ್ರಾಚಾರ್ಯ ಯಲಬುರ್ಗಿಯವರು ಸ್ವಾಗತಿಸಿದರೆ, ನಾಗರಾಜ ಮೆಣಸಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನಂತರ ಪೂಜ್ಯ ಕಲ್ಲಯ್ಯಜ್ಜನವರು ಪುರಾಣಿಕರಾಗಿ ಆಗಮಿಸಿದ್ದ ಹೇಮರಾಜಶಾಸ್ತ್ರಿ ಹಿರೇಮಠ, ವಾರ್ಡ್ ನಂ. 13ರ ಸದಸ್ಯ ಮುತ್ತು ಮುಶಿಗೇರ, ಓಣಿಯ ಹಿರಿಯರು ಸೇರಿ ದೀಪ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ವಿಶೇಷ ಭಕ್ತಿ ಕಾಣಿಕೆ ನೀಡಿದ ಭಕ್ತರನ್ನು ಸನ್ಮಾನಿಸಿದರು. ಪ್ರೊ. ಜಿ.ಎಸ್. ಮಠಪತಿ ಕಾರ್ಯಕ್ರಮ ನಿರೂಪಿಸಿದರು.

### ಗದಗ ಜಿಲ್ಲೆಯಲ್ಲಿ ಅಡ್ಡಿಯಿಲ್ಲದೇ ನಡೆಯುತ್ತಿದೆ ಅಕ್ರಮ ಪಡಿತರ ಸಾಗಾಟ

# ಪ್ರಭಾವಿ ವ್ಯಕ್ತಿಗಳ ಕೃಪಾಕಟಾಕ್ಷ?



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರ ಬಡವರಿಗಾಗಿ ನೀಡುವ ಅನ್ನಭಾಗ್ಯ ಅಕ್ಕಿಯ ಅಕ್ರಮ ಮಾರಾಟ ಗದಗ ಜಿಲ್ಲೆಯಾದ್ಯಂತ ಅವ್ಯಾಹತವಾಗಿ ನಡೆಯುತ್ತಿದ್ದು, ಹಲವಾರು ಬಾರಿ ಪ್ರಕರಣಗಳು ದಾಖಲಾಗುತ್ತಿದ್ದರೂ ಅದು ಕೇವಲ ಕಾಟಾಚಾರಕ್ಕೆ ಎನ್ನುವಂತಾಗಿದೆ. ಅಕ್ರಮ ಅಕ್ಕಿ ಮಾರಾಟ, ಸಾಗಾಟದಲ್ಲಿರುವ ಕಿಂಗ್‌ಪಿನ್‌ಗಳು ಮಾತ್ರ ಪ್ರತಿ ಬಾರಿಯೂ ಬಚಾವಾಗುತ್ತಿರುವುದು ಆಶ್ಚರ್ಯಕ್ಕೆ ಕಾರಣವಾಗಿದೆ.

ಅಕ್ರಮ ಅಕ್ಕಿ ಸಾಗಾಟ ಪ್ರಕರಣಗಳು ರೋಣ, ಮುಂಡರಗಿ ತಾಲೂಕಿನಲ್ಲಿ ನಡೆದಿದ್ದರೂ ಜಿಲ್ಲೆಯಲ್ಲಿ ಯಾವುದೇ ಸಮಸ್ಯೆಗಳಿಲ್ಲ, ಏನೂ ನಡೆದೇ ಇಲ್ಲವೆಂಬಂತೆ ಆಹಾರ ಇಲಾಖೆ ಅಧಿಕಾರಿಗಳ ವರ್ತನೆಯಿದೆ. ಈ ನಡುವೆ ಗದಗ ತಾಲೂಕಿನ ನರಸಾಪೂರ ಗ್ರಾಮದ ಗೋಡೌನ್‌ನಲ್ಲಿ 50 ಚೀಲಕ್ಕೂ ಅಧಿಕ ಅಕ್ಕಿ ಸಂಗ್ರಹಿಸಿರುವುದು ಪತ್ತೆಯಾಗಿದೆ. ಈ ಕುರಿತು ಬೆಟಗೇರಿ ಪೊಲೀಸ್ ಠಾಣೆಯಲ್ಲಿ ಗುರುವಾರ ಸಂಜೆಯವರೆಗೂ ಪ್ರಕರಣ ಮಾತ್ರ ದಾಖಲಾಗಿಲ್ಲ.

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸಧ್ಯ ನಡೆಯುತ್ತಿರುವ ಅಕ್ರಮ ಅಕ್ಕಿ ದಂಧೆಯನ್ನು ಅತ್ಯಂತ ಪ್ರಭಾವಿಗಳೇ ನಡೆಸುತ್ತಿದ್ದಾರೆ. ಇವರಿಗೆ ಪ್ರಭಾವಿ ವ್ಯಕ್ತಿಗಳ ಕೃಪಾಶೀರ್ವಾದವಿದ್ದು, ಯಾವುದೇ ಸಮಸ್ಯೆ ಎದುರಾದರೂ ಪ್ರಭಾವಿಗಳೇ ಮುಂದೆ ನಿಂತು ಸಮಸ್ಯೆ ಇತ್ಯರ್ಥಪಡಿಸಿ ಮತ್ತೆ ಅವರನ್ನು ಅಕ್ರಮ ಅಕ್ಕಿ ದಂಧೆಗೆ ಅನುವು ಮಾಡಿಕೊಡುತ್ತಿದ್ದಾರೆಂಬ ಮಾತುಗಳು ಅವಳಿ ನಗರದ ತುಂಬೆಲ್ಲ ಕೇಳಿಬರುತ್ತಿವೆ.

### ಅನ್ನಭಾಗ್ಯ ಪ್ರಕರಣಗಳ ಸಂಖ್ಯೆ

2024ರ ಏಪ್ರಿಲ್‌ನಿಂದ ಈವರೆಗೆ ಅಕ್ರಮವಾಗಿ ಅನ್ನಭಾಗ್ಯ ಅಕ್ಕಿ ಸಾಗಿಸುತ್ತಿದ್ದ 6 ಪ್ರಕರಣ ದಾಖಲಾಗಿದೆ. ಗದಗ ತಾಲೂಕಿನಲ್ಲಿ 3, ಮುಂಡರಗಿಯಲ್ಲಿ 2 ಹಾಗೂ ರೋಣದಲ್ಲಿ 1 ಪ್ರಕರಣ ದಾಖಲಿಸಿ ಒಟ್ಟು 5.82 ಲಕ್ಷ ರೂ ಮೌಲ್ಯದ 171.30 ಕ್ವಿಂಟಾಲ್ ಅಕ್ಕಿ ವಶಪಡಿಸಿಕೊಳ್ಳಲಾಗಿದ್ದು, 9 ಜನರ ಮೇಲೆ ಪ್ರಕರಣ ದಾಖಲಾಗಿದೆ. 1 ಲಕ್ಷ ರೂ ಮೌಲ್ಯದ ಎರಡು ವಾಹನಗಳನ್ನು ಜಪ್ತಿ ಮಾಡಲಾಗಿದೆ. ಎಲ್ಲಾ ಪ್ರಕರಣಗಳಲ್ಲಿಯೂ ಕೇವಲ ಚಾಲಕರ ಮೇಲೆ ಪ್ರಕರಣ ದಾಖಲಿಸಿ ಮೂಲ ಅಕ್ಕಿ ಸಾಗಾಟಗಾರರ ಮೇಲೆ ಪ್ರಕರಣ ದಾಖಲಿಸದೇ ಇರುವುದು ಹಲವು ಸಂಶಯಕ್ಕೆ ಕಾರಣವಾಗಿದೆ.

# ಶಿವಾನುಭವ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಒಕ್ಕಲಗೇರಿ ಓಣಿಯ ಜಗದ್ಗುರು ತೋಂಟದಾರ್ಯ ಶಾಖಾಮಠ (ಶಾಲಾ ಆವರಣ)ದಲ್ಲಿ ಬಸವ ಕೇಂದ್ರ ಹಾಗೂ ಜಾಗತಿಕ ಲಿಂಗಾಯತ ಮಹಾಸಭೆಯ ಸಂಯುಕ್ತ ಆಶ್ರಯದಲ್ಲಿ ಅ.6ರ ಸಾಯಂಕಾಲ 6 ಗಂಟೆಗೆ ಮಾಸಿಕ ಶಿವಾನುಭವ ಕಾರ್ಯಕ್ರಮ ಜರುಗುವದು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ಬಸವ ಕೇಂದ್ರದ ಅಧ್ಯಕ್ಷ ಕೆ.ಎಸ್. ಚಟ್ಟಿಯವರು ವಹಿಸುವರು. ತ್ರಿವಿಧ ದಾಸೋಹಿ, ಕನ್ನಡದ ಜಗದ್ಗುರು ಪೂಜ್ಯ ತೋಂಟದ ಡಾ. ಸಿದ್ಧಲಿಂಗ ಮಹಾಸ್ವಾಮಿಗಳವರ 6ನೇ ಪುಣ್ಯ ಸ್ಮರಣೋತ್ಸವದ ನಿಮಿತ್ತ ಗದಗ ಬಸವ ಕೇಂದ್ರದ ಸಂಚಾಲಕ ಕಿರಣ್ ತಿಪ್ಪಣ್ಣವರ ಉಪನ್ಯಾಸ ನೀಡುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಶರಣ ಸಾಹಿತಿ ಎ.ಆರ್. ಪಂಪಣ್ಣ ಆಗಮಿಸುವರು. ಕಾರ್ಯಕ್ರಮದ ಭಕ್ತಿ ಸೇವೆಯನ್ನು ಶರಣರಾದ ಮಂಜುನಾಥ್ ಅಡಿವೆಪ್ಪ ಮಲ್ಲಾಪುರ ವಹಿಸಿಕೊಳ್ಳುವರು, ವಚನ ಸಂಗೀತವನ್ನು ಕುಮಾರಸ್ವಾಮಿ ಹಿರೇಮಠ ನಡೆಸಿಕೊಡುವರು ಎಂದು ಪ್ರಕಟಣೆ ತಿಳಿಸಿದೆ.

# ಕಲ್ಯಾಣ ಕ್ರಾಂತಿ ಕುರಿತು ಉಪನ್ಯಾಸ ಇಂದು


■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಅ. 6ರಂದು ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1614ನೇ ಶರಣ ಸಂಗಮದಲ್ಲಿ ಮರಣವೇ ಮಹಾನವಮಿ-ಕಲ್ಯಾಣ ಕ್ರಾಂತಿ ಕುರಿತು ಉಪನ್ಯಾಸ ಹಾಗೂ ವಚನ ಚಿಂತನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ತತ್ವಚಿಂತಕರಾದ ಶರಣೆ ಗೌರಕ್ಕ ಎನ್.ಬಡಿಗಣ್ಣವರ ಇವರು ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ಪ್ರಕಾಶ ಜಡಿಯವರಗೆ ಪಿಎಚ್.ಡಿ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ



ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಮಾಜಶಾಸ್ತ್ರ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವ ಪ್ರಕಾಶ. ಚ. ಜಡಿಯವರಿಗೆ ಹಂಪಿ ಕನ್ನಡ ವಿಶ್ವವಿದ್ಯಾಲಯ ಪಿಎಚ್.ಡಿ ಪದವಿ ನೀಡಿದೆ.

"ಹೈದರಾಬಾದ್ ಕರ್ನಾಟಕದಲ್ಲಿ ಉನ್ನತ ಶಿಕ್ಷಣದ ಸ್ಥಿತಿಗತಿ" ಎಂಬ ವಿಷಯದ ಮೇಲೆ ಮಹಾಪ್ರಬಂಧವನ್ನು ಸಲ್ಲಿಸಿದ್ದರು. ಇವರಿಗೆ ಮಾರ್ಗದರ್ಶಕರಾಗಿ ಕೊಪ್ಪಳದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಹಿರಿಯ ಪ್ರಾಧ್ಯಾಪಕರು ಹಾಗೂ ಪ್ರಾಂಶುಪಾಲರಾದ ಡಾ. ಗಣಪತಿ ಕೆ ಲಮಾಣಿ ಮಾರ್ಗದರ್ಶನ ನೀಡಿದ್ದರು.

### ಧ.ಗ್ರಾ ಯೋಜನೆಯಿಂದ ಶಿಗ್ಲಿ ನಾಕಾ ಬಳಿಯ ಮಾರುತಿ ದೇವಸ್ಥಾನದ ಕಾಮಗಾರಿಗೆ ಧನಸಹಾಯ

# ಧರ್ಮಸ್ಥಳ ಕ್ಷೇತ್ರದ ಮಹಿಮೆ ಅಪಾರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಧರ್ಮಸ್ಥಳ ಕ್ಷೇತ್ರದ ಶ್ರೀ ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ರಾಜ್ಯಾದ್ಯಂತ ಗ್ರಾಮಾಭಿವೃದ್ಧಿ ಯೋಜನೆ ಜಾರಿಯಲ್ಲಿದ್ದು, ಇದು ಸಾಕಷ್ಟು ಜನರಿಗೆ ಪ್ರಯೋಜನ ತಂದಿದೆ ಎಂದು ಗ್ರಾಮಾಭಿವೃದ್ಧಿ ಸಂಸ್ಥೆಯ ಜಿಲ್ಲಾ ನಿರ್ದೇಶಕ ಯೋಗೇಶ ಅಭಿಮತ ವ್ಯಕ್ತಪಡಿಸಿದರು.

ಪಟ್ಟಣದ ಶಿಗ್ಲಿ ನಾಕಾ ಬಳಿ ಜೀರ್ಣೋದ್ಧಾರಗೊಳ್ಳುತ್ತಿರುವ ಪುರಾತನ ಇತಿಹಾಸ ಹೊಂದಿರುವ ಮಾರುತಿ ದೇವಸ್ಥಾನದ ಕಾಮಗಾರಿ ಭರದಿಂದ ಸಾಗಿದ್ದು, ಈ ನಿಟ್ಟಿನಲ್ಲಿ ಧರ್ಮಸ್ಥಳದಿಂದ ಮಾರುತಿ ದೇವಸ್ಥಾನದ ಕಟ್ಟಡ ಕಾಮಗಾರಿಗೆ 1.50 ಲಕ್ಷ ರೂಗಳ ಧನಸಹಾಯಧನದ ಚೆಕ್‌ನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಮಾರುತಿ ದೇವಸ್ಥಾನ ಸಮಿತಿಯವರಿಗೆ ಸಮರ್ಪಿಸಿ ಅವರು ಮಾತನಾಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯನ್ನು ಹೆಗ್ಗಡೆಯವರು 42 ವರ್ಷಗಳ ಹಿಂದೆ ಪ್ರಾರಂಭಿಸಿದ್ದು, ಇದೀಗ



ಹಳ್ಳಿ ಹಳ್ಳಿಗಳಲ್ಲಿ ಚಾಲ್ತಿಯಲ್ಲಿದೆ. ಇದರಿಂದ ಮಹಿಳೆಯರಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಶಕ್ತಿ ತುಂಬುವ ಕಾರ್ಯವಾಗಿದೆ. ರಾಜ್ಯಾದ್ಯಂತ ಅನೇಕ ಗುಡಿ ಗುಂಡಾರಗಳ ಜೀರ್ಣೋದ್ಧಾರ ಕಾರ್ಯಗಳಿಗೆ ಧನಸಹಾಯ ಮಾಡುತ್ತಿದ್ದು, ಇದು ಮಂಜುನಾಥ ಸ್ವಾಮಿಯ ಪ್ರಸಾದ ರೂಪದಲ್ಲಿ ಇಂತಹ ಕಾರ್ಯಗಳಿಗೆ ತಲುಪುತ್ತಿದೆ. ಈ ಮೊತ್ತ ಸದ್ವಿನಿಯೋಗವಾಗಬೇಕು ಎನ್ನುವದು ಖಾವಂದರ ಇಚ್ಛೆಯಾಗಿದೆ ಎಂದರು.

ಪೂರ್ಣಾಜಿ ಖರಾಟೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಳೆಮಲ್ಲಿಕಾರ್ಜುನ ಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಸಮಿತಿ ಅಧ್ಯಕ್ಷ ತಿಪ್ಪಣ್ಣ ಸಂಶಿ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರ್ಗಣ್ಣವರ, ರಾಜಣ್ಣ ಕುಂಬಿ, ಚಂಬಣ್ಣ ಬಾಳಿಕಾಯಿ, ಪ್ರೊ. ಆರ್.ಎನ್. ಪಾಟೀಲ, ಶಿವಯೋಗಿ ಅಂಕಲಕೋಟಿ, ನವೀನ ಬೆಳ್ಳಟ್ಟಿ, ಫಕ್ಕೀರೇಶ ಮ್ಯಾಟಣ್ಣವರ, ಫಕ್ಕೀರೇಶ ರಟ್ಟಿಹಳ್ಳಿ, ಯೋಜನಾಧಿಕಾರಿ ಪುನೀತ್, ದುರ್ಗೇಶ ನಾಯಕ, ಓಂಕಾರಪ್ಪ ಗಜಾಕೋಶ, ಸೋಮಣ್ಣ ಬಸಾಪೂರ, ಶೃತಿ, ಜಿಲ್ಲಾ ಜನಜಾಗೃತಿ ವೇದಿಕೆ ಉಪಾಧ್ಯಕ್ಷ ಚಂದ್ರಶೇಖರ ಹುಣಸಿಕಟ್ಟಿ ಸೇರಿದಂತೆ ಅನೇಕರಿದ್ದರು.

ಶಾಸಕ ಡಾ.ಚಂದ್ರು ಲಮಾಣಿ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಮಾತನಾಡಿ, ಧರ್ಮಸ್ಥಳ ಕ್ಷೇತ್ರದ ಮಹಿಮೆ ಅಪಾರವಾಗಿದ್ದು, ಹತ್ತು ಹಲವಾರು ಯೋಜನೆಗಳ ಮೂಲಕ ಜನರನ್ನು ಮೇಲಕ್ಕೆತ್ತುವ ಕಾರ್ಯವನ್ನು ಸಂಸ್ಥೆ ಮಾಡುತ್ತಿದೆ. ಇಲ್ಲಿನ ದೇವಸ್ಥಾನಕ್ಕೆ ಹೆಗ್ಗಡೆಯವರು ಧನಸಹಾಯ ಒದಗಿಸಿರುವದು ನಮ್ಮ ಭಾಗ್ಯವಾಗಿದ್ದು, ಇಲ್ಲಿನ ಎಲ್ಲ ಸಮಿತಿಯವರು ಉತ್ತಮ ವಿಚಾರಧಾರೆಯೊಂದಿಗೆ ಇಂತಹ ಕಾರ್ಯಕ್ಕೆ ಮುಂದಾಗಿದ್ದಾರೆ. ಅನೇಕ ದಾನಿಗಳು ಸಹಾಯ ಮಾಡುವದಕ್ಕೆ ಮುಂದಾಗುತ್ತಿದ್ದಾರೆ. ಇಲ್ಲಿ ನೀಡಿದ ದಾನ ಸತ್ಪಾತ್ರಕ್ಕೆ ತಲುಪುತ್ತದೆ ಎನ್ನುವದರಲ್ಲಿ ಎರಡು ಮಾತಿಲ್ಲ ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka